# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 40 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 16–08–2023 ಬುಧವಾರ ಪುಟ: 4 ಬೆಲೆ : ರೂ.2–00
Volume - 01 Issue - 40 Title- Code: KARKAN 28269 Chitradurga Date : 16-08-2023 Wednesday Page: 4 Price: Rs. 2-00



ಒಳ ಪುಟದ ಸುದ್ದಿಗಳು


2 ನುಡಿದಂತೆ ನಡೆದಿದ್ದೇವೆ ಕಿರು ಹೊತ್ತಿಗೆ ಬಿಡುಗಡೆ

3 ಕವಾಡಿಗರಹಟ್ಟಿ ಅಭಿವೃದ್ಧಿಗೆ 4 ಕೋಟಿ ರೂ. ಅನುದಾನ ಮಂಜೂರು – ಡಿ. ಸುಧಾಕರ್

4 ಮದಕರಿ ವಿದ್ಯಾ ಸಂಸ್ಥೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ


## ಗ್ಯಾರಂಟಿ ಯೋಜನೆ ಜಾರಿಯಿಂದ ಸಾಮಾಜಿಕ ಬದಲಾವಣೆ

# ಜನರೋದ್ಧಾರವೇ ದೇಶದ ಉದ್ಧಾರ : ಡಿ.ಸುಧಾಕರ್



**ಚಿತ್ರದುರ್ಗ :** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳ ಜಾರಿಯಿಂದ ರಾಜ್ಯದಲ್ಲಿ ಬಹುದೊಡ್ಡ ಸಾಮಾಜಿಕ ಬದಲಾವಣೆ ಮೂಡಲಿದೆ. ಬಡ ಜನರ ಶಕ್ತಿ ಹೆಚ್ಚಲಿದೆ. ಜನರೋದ್ಧಾರವೇ ದೇಶದ ನಿಜವಾದ ಉದ್ಧಾರವಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್ ಹೇಳಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಮಂಗಳವಾರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ 77ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಅವರು, ಗೌರವ ರಕ್ಷೆ ಸ್ವೀಕರಿಸಿ ನಂತರ ತಮ್ಮ ಸ್ವಾತಂತ್ರ್ಯೋತ್ಸವದ ಸಂದೇಶ ನೀಡಿದರು.

ಸರ್ವರಿಗೂ ಸಮಾನ ಅವಕಾಶಗಳು ದೊರೆತರೆ ದೇಶದ ಪ್ರಗತಿ ಸಾಧ್ಯ. ಸರ್ಕಾರದ ಐದು ಯೋಜನೆಗಳ



ಜಾರಿ ಪವಾಡವೇನೂ ಅಲ್ಲ. ರಾಜ್ಯದ ಸಂಪತ್ತನ್ನು ಹಂಚಿ, ಸಾಮಾಜಿಕ ನ್ಯಾಯ ದೊರಕಿಸಿಕೊಡುವ ಪ್ರಯತ್ನವಾಗಿದೆ. ನಿಜವಾದ ಸರ್ಕಾರ ಜನಕಲ್ಯಾಣದ ಬಗ್ಗೆ ಚಿಂತಿಸುತ್ತದೆ. ಸರ್ಕಾರದ ಈ ಗ್ಯಾರಂಟಿ ಯೋಜನೆಗಳನ್ನು ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ದೃಷ್ಟಿಕೋನದ ಮೂಲಕ ಚಿಂತಿಸುವುದು ಸೂಕ್ತ ಎನಿಸುತ್ತದೆ ಎಂದರು.


5 ಜನಕಲ್ಯಾಣ ಯೋಜನೆಗಳಲ್ಲಿ ಈಗಾಗಲೇ 4 ಗ್ಯಾರಂಟಿ ಯೋಜನೆಗಳು ರಾಜ್ಯದ ಜನತೆಗೆ ತಲುಪಿ ಸಾಕಾರಗೊಳಿಸಲಾಗಿದೆ. ಜಿಲ್ಲೆಯಲ್ಲಿ ಸಹ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗಿದೆ. ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವ "ಶಕ್ತಿ ಯೋಜನೆ"ಯಿಂದ ಮಹಿಳಾ ಸಬಲೀಕರಣದತ್ತ ನಮ್ಮ ಸರ್ಕಾರ ದಿಟ್ಟ ಹೆಜ್ಜೆ ಇರಿಸಿದೆ. ಸಾಮಾಜಿಕ, ಆರ್ಥಿಕವಾಗಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಶತಶತಮಾನಗಳಿಂದ ಅವಕಾಶವಂಚಿತರಾಗಿದ್ದ ಮಹಿಳೆಯರಿಗೆ ಈ ಮೂಲಕ ಶಕ್ತಿ ತುಂಬುವ ಮತ್ತು ಅವರ ಕನಸುಗಳಿಗೆ ಪ್ರೋತ್ಸಾಹಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಜಿಲ್ಲೆಯಿಂದ 30,15,041 (ಸುಮಾರು 30 ಲಕ್ಷಕ್ಕೂ ಅಧಿಕ) ಮಹಿಳೆಯರು ಯೋಜನೆಯ ಸದುಪಯೋಗ ಪಡಿಸಿಕೊಂಡು, ಸರ್ಕಾರಿ ಸಾರಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣ ಮಾಡಿದ್ದಾರೆ. ಈ ಮೂಲಕ ನಿಗಮಕ್ಕೆ 11. 44 ಲಕ್ಷ ರೂ. ಗಳ ಮೊತ್ತದ ಪ್ರಯಾಣ ಕೈಗೊಂಡು, ಮಹಿಳಾ ಮಣಿಗಳು ನಿಗಮಕ್ಕೆ ಸರಾಸರಿ ಪ್ರತಿ ದಿನಕ್ಕೆ ರೂ.10.00 ಲಕ್ಷಗಳ ಆದಾಯವನ್ನು ಕೊಟ್ಟಿರುತ್ತಾರೆ."ಗೃಹ ಲಕ್ಷ್ಮೀ" ಯೋಜನೆಯಡಿ ಜಿಲ್ಲೆಯಲ್ಲಿ ಶೇ.86ಕ್ಕೂ ಅಧಿಕ ಮಹಿಳೆಯರು ನೊಂದಣಿ ಮಾಡಿಕೊಂಡಿದ್ದಾರೆ. ಇದರ ಸಂಖ್ಯೆ 3,47,624 ಆಗಿದೆ. ಆಗಸ್ಟ್ 27ರಂದು ಫಲಾನುಭವಿಗಳಿಗೆ ಯೋಜನೆಯ ಮೊತ್ತ ತಲಾ ರೂ.2,000/– ಅನ್ನು ಕುಟುಂಬದ ಮಹಿಳಾ ಮುಖ್ಯಸ್ಥೆಗೆ ವರ್ಗಾಯಿಸಲು ಸಕಲ ಸಿದ್ಧತೆಗಳು ಪೂರ್ಣಗೊಂಡಿರುತ್ತದೆ."ಅನ್ನ ಭಾಗ್ಯ" ಯೋಜನೆಯಡಿ ಪ್ರತಿ ಬಿ.ಪಿ.ಎಲ್. ಕುಟುಂಬದ ಫಲಾನುಭವಿಗೆ ತಲಾ 5 ಕೆ.ಜಿಯಂತೆ ಆಹಾರ ಧಾನ್ಯವನ್ನು, ಉಳಿದ 5 ಕೆ.ಜಿಗೆ ರೂ.170/– ನೀಡಲಾಗಿದೆ. ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 3,19,813 ಫಲಾನುಭವಿಗಳಿಗೆ ಆಹಾರ ಧಾನ್ಯದೊಂದಿಗೆ ಅವರ ಖಾತೆಗೆ ಸುಮಾರು ರೂ.18.43 ಕೋಟಿಗಳನ್ನು ಸರ್ಕಾರದಿಂದ ಸಂದಾಯ ಮಾಡಲಾಗಿದೆ. "ಗೃಹಜ್ಯೋತಿ" ಯೋಜನೆಯು ಈಗಾಗಲೇ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಮೂರು ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ತಲುಪಿದ್ದು ಈ ತಿಂಗಳಿನಿಂದಲೇ ಝೀ–ರೋ ವಿದ್ಯುತ್ ಬಿಲ್ಲನ್ನು ಸಹ ಎಲ್ಲಾ ಫಲಾನುಭವಿಗಳಿಗೆ ನೀಡಲಾಗಿರುತ್ತದೆ. ಒಟ್ಟಾರೆಯಾಗಿ ನಾಲ್ಕು ಭಾಗ್ಯಗಳು ಚಿತ್ರದುರ್ಗ ಜಿಲ್ಲೆಯಲ್ಲಿ ಪರಿಣಾಮಕಾರಿಯಾದ ರೀತಿಯಲ್ಲಿ ಲೋಕ ಕಲ್ಯಾಣದ ರೂಪದಲ್ಲಿ ಜನತೆಗೆ ಪ್ರಾಪ್ತವಾಗಿರುವುದು. ಒಂದು ರೀತಿಯಲ್ಲಿ ಹೊಂಗಿರಣಗಳು ಮೂಡಿದಂತಾಗಿದೆ.

ಈ ದಿನದಂದು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರ ಪುತ್ರರನ್ನು ನೆನಪಿಸಿಕೊಳ್ಳುವ ದಿನವಾಗಿದೆ. ಈ ಸಂದರ್ಭದಲ್ಲಿ ಸ್ವಾತಂತ್ರ್ಯ ಹೋರಾಟಕ್ಕೆ ಜಿಲ್ಲೆಯ ಕೊಡುಗೆ ಸ್ಮರಿಸಿದ ಅವರು ಜಿಲ್ಲೆಯ ತುರುವನೂರಿಗೂ ಗಾಂಧೀಜಿಯವರಿಗೂ ವಿಶೇಷ ಸಂಬಂದವಿತ್ತು, ಇಲ್ಲಿ ಮನೆ ಮನೆಗೂ ಗಾಂಧಿಯವರೆ ಪ್ರೇರಣೆಯಾಗಿದ್ದರು.

ಹಿಂದೊಮ್ಮೆ ಬ್ರಿಟೀಷರ ಆಳ್ವಿಕೆಯಲ್ಲಿದ್ದ ಭಾರತ ಸ್ವಾತಂತ್ರ್ಯ ನಂತರ ಇಂದು ಜಾಗತಿಕ ಶಕ್ತಿಯಾಗಿ ಹೊರಹೊಮ್ಮಿದೆ – ಅದು ಆರ್ಥಿಕತೆ ಇರಲಿ, ವಿಜ್ಞಾನ–ತಂತ್ರಜ್ಞಾನವಿರಲಿ, ಸೇನಾ ಬಲವಿರಲಿ, ಜಾಗತಿಕ ಶಾಂತಿಯ ವಿಷಯ ಇರಲಿ. ಒಂದೊಮ್ಮೆ ಅಸಮಾನತೆ, ಅಸ್ಪೃಶ್ಯತೆಯ ವಿರುದ್ಧದ ಹೋರಾಟ ಕಂಡ ನೆಲದಲ್ಲಿ ಆರ್ಥಿಕತೆ, ಸಮಾನತೆ, ರಾಷ್ಟ್ರೀಯತೆ, ಸಮಗ್ರತೆಯ ಅಡಿಪಾಯದಲ್ಲಿ ಬಲಿಷ್ಠ ಭಾರತವು ನಿರ್ಮಾಣವಾಗಿದೆ. ಹಾಗೆಯೇ ಅಭಿವೃದ್ಧಿ ಎಂದರೆ ಕೇವಲ ನಗರಗಳ ಅಭಿವೃದ್ಧಿಯಲ್ಲ ಎನ್ನುವುದು ನಮ್ಮ ಸರ್ಕಾರದ ಕನಸು ಸ್ವಾತಂತ್ರ್ಯದ ನಿಜವಾದ ಪರಿಕಲ್ಪನೆ ದಿಲ್ಲಿ ಜತೆ ಹಳ್ಳಿಯ ಅಭಿವೃದ್ಧಿ ಎನ್ನುವುದು. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ. ಸ್ವಾತಂತ್ರ್ಯಕ್ಕಾಗಿ ಅವರು ಮಾಡಿದ ಹೋರಾಟವನ್ನು ಈ ದಿನ ನಾವೆಲ್ಲರೂ ಸ್ಮರಿಸಬೇಕಾಗಿರುತ್ತದೆ ಎಂದರು.


2ನೇ ಪುಟಕ್ಕೆ


## ಸಕಾಲದಲ್ಲಿ ಯೋಜನೆಗಳನ್ನು ತಲುಪಿಸುವುದೇ ದೇಶ ಸೇವೆ – ದಿವ್ಯಪ್ರಭು



**ಚಿತ್ರದುರ್ಗ :** ರಾಜ್ಯದ ಜನಸಂಖ್ಯೆಯ ಶೇ.01 ರಷ್ಟು ಪ್ರಮಾಣದಲ್ಲಿ ಇರುವ ಸರ್ಕಾರಿ ನೌಕರರ ವರ್ಗ ಜನರ ಸೇವೆ ಮಾಡಬೇಕು. ಜನರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸುವ ಯೋಜನೆಗಳನ್ನು ಫಲಾನುಭವಿಗಳಿಗೆ ಅನುಕೂಲವಾಗುವಂತೆ ಸಕಾಲದಲ್ಲಿ ತಲುಪಿಸುವುದೇ ನಿಜವಾದ ದೇಶಸೇವೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಮಂಗಳವಾರ 77ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಜನರ ಅಭ್ಯುದಯಕ್ಕಾಗಿ ಸರ್ಕಾರ ಹಲವಾರು ನೂತನ ಯೋಜನೆಗಳನ್ನು ಜಾರಿಗೆ ತಂದಿದೆ. ಇವುಗಳು ಫಲಾನುಭವಿಗಳ ಜೀವನದಲ್ಲಿ ಮಹತ್ತರ ಬದಲಾವಣೆ ತರಲಿವೆ. ಈ ಯೋಜನೆಗಳನ್ನು ನಿಗದಿತ ಕಾಲ ಮಿತಿಯಲ್ಲಿ ಜನರಿಗೆ ತಲುಪಿಸಿದರೆ, ಇದೇ ಸರ್ಕಾರಿ ನೌಕರರು ದೇಶಕ್ಕೆ ನೀಡುವ ಕೊಡುಗೆಯಾಗಿದೆ. ಸರ್ಕಾರಿ ನೌಕರರನ್ನು ಜನರ ಸೇವಕರು ಎಂದು ಕರೆಯಲಾಗಿದೆ. ಜನರ ಸೇವೆಗಾಗಿಯೇ ನಾವು ಇದ್ದೇವೆ. ನಿಸ್ಪಕ್ಷಪಾತವಾಗಿ ಜನರ ಸೇವೆ ಮಾಡುವುದಾಗಿ ಸ್ವಾತಂತ್ರ್ಯೋತ್ಸವದ ಈ ಸಂದರ್ಭದಲ್ಲಿ ಅಧಿಕಾರಗಳು ಹಾಗೂ ನೌಕರರು ಪ್ರತಿಜ್ಞೆ ಮಾಡಬೇಕು ಎಂದು ಅವರು ಹೇಳಿದರು.

ಬೇರೆ ದೇಶಗಳಿಗೆ ಹೋಲಿಸಿದರೆ ನಮ್ಮ ದೇಶದಲ್ಲಿ ಮಾನವ ಸಂಪನ್ಮೂಲ ಹೆಚ್ಚಾಗಿದೆ. ಅದರಲ್ಲೂ ಯುವ ಜನರು ಹೆಚ್ಚಾಗಿದ್ದು ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರು ಕೊಡುಗೆ ನೀಡಿದರೆ ದೇಶ ಸಮೃದ್ಧವಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಉಪನಿರ್ದೇಶಕ ಮಧುಸೂದನ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಸಿಬ್ಬಂದಿ ಇದ್ದರು.

## ಸ್ವಾತಂತ್ರ್ಯಕ್ಕೆ ಹೋರಾಡಿದ ಮಹನೀಯರನ್ನು ಸ್ಮರಿಸೋಣ



**ಚಳ್ಳಕೆರೆ :** ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಮಹನೀಯರನ್ನು ಪ್ರತಿನಿತ್ಯವೂ ಸ್ಮರಿಸಬೇಕು. ದೇಶ ರಕ್ಷಣೆ, ದೇಶಾಭಿಮಾನ ಎಲ್ಲರಲ್ಲೂ ಮೂಡಬೇಕು ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ಅವರು, ನಗರದ ಬಿಸಿನೀರು ಮುದ್ದಪ್ಪ ಸರ್ಕಾರಿ ಪ್ರೌಢಶಾಲಾ ಬಯಲು ರಂಗಂದಿರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಆಯೋಜಿಸಿದ್ದ 77ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸಂವಿಧಾನ ನಮ್ಮ ಎಲ್ಲಾ ರೀತಿಯ ಹಕ್ಕು ಕಲ್ಪಿಸಿದೆ. ಅದನ್ನು ಪ್ರತಿಯೊಬ್ಬರೂ ಉತ್ತಮ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು. ರಾಷ್ಟ್ರ ಪ್ರೇಮದ ಬಗ್ಗೆ ವಿದ್ಯಾರ್ಥಿಗಳಲ್ಲಿ ಬೆಳೆಸುವ ಕೆಲಸ ಎಲ್ಲರೂ ಮಾಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹಳ್ಳಿಯಿಂದ ದಿಲ್ಲಿವರೆಗೆ ಸರ್ವರಿಗೂ ಸಮಪಾಲು, ಸಮಬಾಳು ಸಿಗುವಂತಾಗಬೇಕು, ಇಂದಿನ ಯುವ ಪೀಳಿಗೆ ಮಹಾತ್ಮ ಗಾಂಧಿ, ಡಾ.ಬಿ.ಆರ್. ಅಂಬೇಡ್ಕರ್ ಲಗಂಗಾಧರ ತಿಲಕ್, ಭಗತ್ ಸಿಂಗ್, ಸಂಗೊಳಿರಾಯಣ ಸೇರಿದಂತೆ ಮಹಾನ್ ದೇಶ ಪ್ರೇಮಿಗಳ ಬಗ್ಗೆ ತಿಳಿಸಸಬೇಕು.

ನಮ್ಮ ಕಾಂಗ್ರೆಸ್ ಸರ್ಕಾರದಲ್ಲಿ ಸರ್ವರಿಗೂ ಸಮಪಾಲು, ಸಮಬಾಳು ಬೀಡಲು ಸಾಧ್ಯ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪ್ರಣಾಳಿಕೆಯಲ್ಲಿ ತಿಳಿಸಿದಂತೆ ಐದು ಗ್ಯಾರಂಟಿಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಪ್ರತಿಯೊಬ್ಬರಿಗೂ ಗೃಹಜ್ಯೋತಿ, ಗೃಹಲಕ್ಷ್ಮಿ, ಶಕ್ತಿಯೋಜನೆ, ಯುವ ನಿಧಿ, ಅನ್ನಭಾಗ್ಯ ಯೋಜನೆಗಳನ್ನು ಪ್ರತಿಮನೆಗೂ ತಲುಪಿಸುವ ಮೂಲಕ ಸರ್ವಜನರಿಗೂ ಸಮಬಾಳು ನೀಡಿದ ಪಕ್ಷವಾಗಿದೆ. ನನ್ನಗೆ ಮತನೀಡಿ ಹ್ಯಾಟ್ರಿಕ್ ಸಾಧನೆ ಮಾಡಲು ಸಹಕರಿಸಿದ ಪ್ರತಿ ಯೊಬ್ಬರಿಗೂ ಅಭಿನಂದನೆ ಸಲ್ಲಿಸುವೆ. ಜನರು ನೀಡಿದ ಮತದಿಂದ ಇಂದು 11ನೇ ಸ್ವಾತಂತ್ರ್ಯ ದಿನಾಚರಣೆ ಯಲಿ ಭಾಗವಹಿಸಿದ್ದೇನೆ. ನಿಮ್ಮ ಋಣವನ್ನು ತೀರಿಸುವೆ ಎಂದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, ರಾಷ್ಟ್ರೀಯ ಹಬ್ಬಗಳನ್ನು ಪ್ರತಿಯೊಬ್ಬರು ಮನೆಯ ಹಬ್ಬದಂತೆ ಆಚರಿಸಿ, ಧ್ವಜರೋಹಣ ನೆರವೇರಿಸಿದರು.

ನಗರಸಭಾ ಸದಸ್ಯರಾದ ಟಿ.ಮಲ್ಲಿಕಾರ್ಜುನ, ಕವಿತಾಬೋರಯ್ಯ, ಟಿ.ಶಿವಕುಮಾರ್, ಓ.ಸುಜಾತ, ಸುಮಭರಮಣ್ಣ, ಎಸ್.ಜಯಣ್ಣ, ಜಿ.ಗೋವಿಂದ, ಜಯಲಕ್ಷ್ಮಿ, ಎಂ.ನಾಗವೇಣಿ, ಸುಮಕ್ಕ, ಡಿ.ನಿರ್ಮಲ, ಎಂ.ಸಾವಿತ್ರಮ್ಮ, ಎಚ್.ಸಿ.ವಿರೂಪಾಕ್ಷಿ, ಆರ್.ಮಂಜುಳಾ, ಚಳ್ಳಕೆರೆಪ್ಪ, ಬಿ.ಟಿ.ರಮೇಶ ಗೌಡ, ಕೆ.ವೀರಭದ್ರಯ್ಯ, ಜೈತುಂಬಿ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಶ್ರೀ ಅಹೋಬಲ ಟಿವಿಎಸ್‌ನಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ




**ಚಿತ್ರದುರ್ಗ :** ನಗರದ ತುರುವನೂರು ರಸ್ತೆಯಲ್ಲಿರುವ ಶ್ರೀ ಅಹೋಬಲ ಟಿವಿಎಸ್ ಶೋ ರೂಂ ನಲ್ಲಿ 77 ನೇ ಸ್ವಾತಂತ್ರ್ಯ ದಿನಾಚರಣೆ ಧ್ವಜರೋಹಣವನ್ನು ವೇದಾಂತ ಆಸ್ಪತ್ರೆಯ ಡಾ.ತೇಜಸ್ವಿ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ.ತೇಜಸ್ವಿ ಅವರು ಶಿಕ್ಷಣ ಮತ್ತು ಆರೋಗ್ಯ ಸುಧಾರಣೆಯ ಕಡೆ ಹೆಚ್ಚು ಆದ್ಯತೆ ನೀಡಿದರೇ ದೇಶ ಅಭಿವೃದ್ಧಿ ಕಡೆ ಹೆಜ್ಜೆ ಹಾಕಲು ಸಹಕಾರಿಯಾಗಿದೆ. ಸ್ವಾತಂತ್ರ್ಯ ದೊರಕಿ 77 ವರ್ಷಗಳು ಕಳೆದರು ಸಹ ಹಲವು ಕ್ಷೇತ್ರದಲ್ಲಿ ಇನ್ನು ಹೆಚ್ಚಿನ ಸುಧಾರಣೆ ಅವಶ್ಯಕತೆ ಇದೆ. ದೇಶದಲ್ಲಿ ಉದ್ಯೋಗ ಸೃಷ್ಟಿಸಲು ಹೆಚ್ಚು ಒತ್ತು ನೀಡುವ ಅವಶ್ಯಕತೆ ಇದೆ. ದೇಶ ಅಭಿವೃದ್ಧಿ ಕಡೆ ಹೆಜ್ಜೆ ಹಾಕುತ್ತಿದ್ದು ಮತ್ತಷ್ಟು ವೇಗ ನೀಡಬೇಕು ಎಂದು ತಿಳಿಸಿದರು.

ಉಪಾನ್ಯಸಕ ವಿಶ್ವನಾಥ್ ಮಾತನಾಡಿ ದೇಶದಲ್ಲಿ ದ್ವೇಷ ಭಾವನೆಗಳು ಹೆಚ್ಚುತ್ತಿದ್ದು ನಾವೆಲ್ಲರೂ ಭಾವೈಕ್ಯತೆಯಿಂದ ಬದುಕ ನಡೆಸಬೇಕು. ಸ್ವಾತಂತ್ರ್ಯ ದಿನಾಚರಣೆ ಆಚರಣೆ ಅರ್ಥ ಬರಲು ನಮ್ಮಿಂದ ಬದಲಾವಣೆ ಆಗಬೇಕು. ದ್ವೇಷ ಅಸಹನೀಯ ಭಾವನೆ ತೊರೆದು ಎಲ್ಲಾರೂ ಕೂಡಿ ಬಾಳಬೇಕು ಎಂದರು.

ಶ್ರೀ ಅಹೋಬಲ ಟಿವಿಎಸ್ ಮಾಲೀಕ ಪಿ.ವಿ.ಅರುಣ್ ಮಾತನಾಡಿ ಭಾರತ ದೇಶ ಜಾತ್ಯತೀತ ರಾಷ್ಟ್ರವಾಗಿದೆ. ಆದರೆ ನಮ್ಮಲ್ಲಿ ದಿನದಿಂದ ದಿನಕ್ಕೆ ಜಾತಿ ಭಾವನೆ ಹೆಚ್ಚುತ್ತಿದೆ. ಜಾತಿ ಪದ್ಧತಿ ನಿರ್ಮೂಲನೆಯಾಗಬೇಕು. ಸರ್ಕಾರಗಳು ಬಡವರು ಮಧ್ಯಮ ವರ್ಗದ ಜನರನ್ನು ಸಬಲರಾಗಿಸುವ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಆರ್ಥಿಕವಾಗಿ ಬಲಿಷ್ಠಗೊಳಿಸುವ ಕಡೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಗಮನ ಹರಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಬ್ಯಾಂಕ್ ಕಾಲೋನಿ ಮೋಹನ್, ಎಸ್.ಪಿ.ಮಂಜುಳ, ಜನರಲ್ ಮ್ಯಾನೇಜರ್ ವಿದ್ಯಾದರ್, ಸೇಲ್ಸ್ ಮ್ಯಾನೇಜರ್ ರವಿ, ಸಾಧಿಕ್, ಶ್ರೀನಿವಾಸ್ ಮತ್ತು ಟಿವಿಎಸ್ ಬಳಗ ಸಿಬ್ಬಂದಿಗಳು ಹಾಜರಿದ್ದರು.

**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

# ನುಡಿದಂತೆ ನಡೆದಿದ್ದೇವೆ ಕಿರು ಹೊತ್ತಿಗೆ ಬಿಡುಗಡೆ

**ಚಿತ್ರದುರ್ಗ :** ಜನ ಸಾಮಾನ್ಯರ ಬದುಕಿನಲ್ಲಿ ಮಹತ್ವದ ಬದಲಾವಣೆ ತಂದಿರುವ, ರಾಜ್ಯ ಸರ್ಕಾರದ ಖಾತ್ರಿ ಯೋಜನೆಗಳ ಜಾರಿ ಕುರಿತು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರ ತಂದಿರುವ "ಪ್ರಗತಿಪರ ಅಭಿವೃದ್ಧಿಗಾಗಿ ನುಡಿದಂತೆ ನಡೆದಿದ್ದೇವೆ" ಎಂಬ ಕಿರು ಹೊತ್ತಿಗೆಯನ್ನು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್ ಅವರು ಬಿಡುಗಡೆ ಮಾಡಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಮಂಗಳವಾರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ 77ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಬಳಿಕ ಸಚಿವ ಡಿ.ಸುಧಾಕರ್ ಅವರು ಕಿರುಹೊತ್ತಿಗೆ ಬಿಡುಗಡೆಗೊಳಿಸಿದರು.

ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸುವ ಶಕ್ತಿ ಯೋಜನೆ, ಪ್ರತಿ ಮನೆಗೆ ಗರಿಷ್ಠ 200 ಯೂನಿಟ್ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ, ಬಿಪಿಎಲ್ ಹಾಗೂ ಎಪಿಎಲ್ ಕಾರ್ಡ್ ಹೊಂದಿರುವ ಕುಟುಂಬದ ಮನೆಯೊಡೆತಿಗೆ ಪ್ರತಿ ತಿಂಗಳು ರೂ.2000 ನೀಡುವ ಗೃಹಲಕ್ಷ್ಮೀ, ಬಿಪಿಎಲ್ ಕಾರ್ಡುದಾರರಿಗೆ ಪ್ರತಿ ತಿಂಗಳು 10 ಕೆ.ಜಿ. ಅಕ್ಕಿ ನೀಡುವ ಅನ್ನಭಾಗ್ಯ, ಪದವಿ ಹಾಗೂ ಡಿಪ್ಲೊ?ಲೀಮೋ ಪದವಿ ಪಡೆದು ನಿರುದ್ಯೋಗದಿಂದ ಬಳಲುತ್ತಿರುವ ಯುವಕ–ಯುವತಿಯರಿಗೆ ಎರಡು



ವರ್ಷಗಳ ಭತ್ಯೆ ನೀಡುವ ಯುವನಿಧಿ ಯೋಜನೆಗಳ ಸಂಪೂರ್ಣ ಮಾಹಿತಿ ಕಿರು ಹೊತ್ತಿಗೆಯಲ್ಲಿ ನೀಡಲಾಗಿದೆ. ಯೋಜನೆಗಳ ಲಾಭ ಪಡೆಯಲು ಅರ್ಜಿ ಸಲ್ಲಿಸುವ ವಿಧಾನಗಳನ್ನು ಸರಳವಾಗಿದೆ. ಇದರೊಂದಿಗೆ ಪಿಟಿಸಿಎಲ್ ಹಾಗೂ ಭೂ ಕಂದಾಯ ಕಾಯ್ದೆಗಳ ತಿದ್ದುಪಡಿಯ ಬಗ್ಗೆ ಮಾಹಿತಿ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಿರು ಹೊತ್ತಿಗೆಗೆ ಮುನ್ನುಡಿ ಬರೆದು ಹಾರೈಸಿದ್ದಾರೆ. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ, ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮ ಇಲಾಖೆಗಳ ವತಿಯಿಂದ ಅನುಷ್ಟಾನಗೊಳಿಸುತ್ತಿರುವ ಯೋಜನೆಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಇದರೊಂದಿಗೆ ಯೋಜನೆ ಫ಼ಲಾನುಭವಿಗಳ ಅನಿಸಿಕೆಗಳನ್ನು ಕಿರು ಹೊತ್ತಿಗೆಯಲ್ಲಿ ಮುದ್ರಿಸಲಾಗಿದೆ.

ಈ ಸಂದರ್ಭದಲ್ಲಿ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿ.ಪಂ ಸಿಇಓ ಸೋಮಶೇಖರ್, ಜಿಲ್ಲಾ ಪೊ?ಲಿಸ್ ಅಧೀಕ್ಷಕ ಕೆ.ಪರಶುರಾಮ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಬಿ.ವಿ.ತುಕಾರಾಂರಾವ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್


### ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆ



**ಚಿತ್ರದುರ್ಗ :** ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆಯನ್ನು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಚರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ಸಲ್ಲಿಸಿದರು.
ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

### "ಭಾರತ ಮಾತೆ ಪ್ರತಿಯೊಬ್ಬ ಭಾರತೀಯನ ಧ್ವನಿ"



**ನವದೆಹಲಿ :** "ಭಾರತ ಮಾತೆ ಪ್ರತಿಯೊಬ್ಬ ಭಾರತೀಯನ ಧ್ವನಿ" ಎಂದು ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಇಂದಿಲ್ಲಿ ಹೇಳಿದ್ದಾರೆ.

77ನೇ ಸ್ವಾತಂತ್ರ್ಯ ದಿನದಂದು ದೇಶದ ಜನತೆಗೆ ಶುಭಾಶಯ ತಿಳಿಸಿದ ಅವರು ಭಾರತ ಮಾತೆ ಪ್ರತಿಯೊಬ್ಬ ಭಾರತೀಯನ ಧ್ವನಿ ಎಂದು ಬಣ್ಣಿಸಿದ್ದಾರೆ.


ಸಾಮಾಜಿಕ ಜಾಲತಾಣದಲ್ಲಿ ಶುಭಾಶಯ ಕೋರಿರುವ ಅವರು 'ಭಾರತ್ ಜೋಡೋ ಯಾತ್ರೆ'ಯ ಅನುಭವ ಹಂಚಿಕೊಂಡ ಅವರು ಸಮುದ್ರದ ಅಂಚಿನಲ್ಲಿ ನೂರ ನಲವತ್ತೈದು ದಿನಗಳ ನಡಿಗೆಯ ಮೂಲಕ ಕಾಶ್ಮೀರದ ಮೃದುವಾದ ಹಿಮವನ್ನು ತಲುಪಿದ ಅನುಭವ ಹಂಚಿಕೊಂಡು ಜನರಿಗೆ ಧನ್ಯವಾದ ಹೇಳಿದ್ದಾರೆ

ಕಳೆದ ವರ್ಷ ನಾನು ಮನೆ ಎಂದು ಕರೆಯುವ ಭೂಮಿಯಲ್ಲಿ ನೂರ ನಲವತ್ತೈದು ದಿನಗಳನ್ನು ಕಳೆದಿದ್ದೇನೆ. ಸಮುದ್ರದ ಅಂಚಿನಲ್ಲಿ ಪ್ರಾರಂಭಿಸಿ ಶಾಖ, ಧೂಳು ಮತ್ತು ಮಳೆಯ ಮೂಲಕ ನಡೆದಿದ್ದೇನೆ. ಕಾಡುಗಳು, ಪಟ್ಟಣಗಳು ಮತ್ತು ಬೆಟ್ಟಗಳ ಮೂಲಕ ನನ್ನ ಪ್ರೀತಿಯ ಕಾಶ್ಮೀರ ತಲುಪಿದ್ದು ಖುಷಿಕೊಟ್ಟಿದೆ.ಈ ವೇಳೆ ಜನರ ನೋವು ಅರ್ಥ ಮಾಡಿಕೊಂಡಿದ್ದೇನೆ ಎಂದಿದ್ಧಾರೆ.ಯಾತ್ರೆ ಸಮಯದಲ್ಲಿ ಮೊಣಕಾಲಿನ ನೋವು ಕಾಣಿಸಿಕೊಂಡಿತು. ದೇಶದ ಜನರ ನೋವು ಅರ್ಥ ಮಾಡಿಕೊಳ್ಳಲು ನನ್ನ ನೋವು ಮರೆತ ಎಂದು ಎದುರಿಸಿದ ನೋವು ಮತ್ತು ಯಾತ್ರೆ ಮುಂದುವರೆಸಲು ಸಹಾಯ ಮಾಡಿದ ಪ್ರೇರಣೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿದ್ದಾರೆ.

### ನಿಮಗೂ 77 ವರ್ಷ ಆಗುತ್ತಿದೆ : ಡಿಕೆ ಶಿವಕುಮಾರ್

**ಬೆಂಗಳೂರು :** ದೇಶದಲ್ಲಿ ಸ್ವಾತಂತ್ರ್ಯ ಆಚರಣೆ ಮಾಡುತ್ತಿದ್ದೇವೆ. ಹಾಗೇ ಸಂಗೊಳ್ಳಿ ರಾಯಣ್ಣ ಜನ್ಮ ದಿನಾಚರಣೆ ಮಾಡುತ್ತಿದ್ದೇವೆ. ಗಣರಾಜ್ಯದ ದಿನ ಅವರ ಹುತಾತ್ಮ ದಿನ ಆಚರಣೆ ಮಾಡುತ್ತೇವೆ. 77ನೇ ಸ್ವಾತಂತ್ರ್ಯ ಸಂಭ್ರಮಾಚರಣೆಯಲ್ಲಿದ್ದೇವೆ. ನಿಮಗು 77 ವರ್ಷ ಆಗುತ್ತಿದೆ ಎಂದು ಹೇಳುವ ಮೂಲಕ ಡಿಕೆ ಶಿವಕುಮಾರ್?, ಸಿಎಂ ಸಿದ್ದರಾಮಯ್ಯ ಅವರಿಗೆ ವಯಸ್ಸಿನ ನೆನಪು ಮಾಡಿಸಿದರು. ನಾವೆಲ್ಲಾ ಸೇರಿ ಬಲಿಷ್ಠವಾದ ಭಾರತ ನಿರ್ಮಾಣ ಮಾಡಬೇಕು. ಅಭಿವೃದ್ಧಿಶೀಲ ಕರ್ನಾಟಕ ನಿರ್ಮಾಣ ಮಾಡಬೇಕು. ಬ್ರೀಟಿಷರನ್ನು ತೊಲಗಿಸಿದ ಹಾಗೆ ಕೋಮುವಾದಿಗಳನ್ನು ಸೋಲಿಸಬೇಕಿದೆ. ಕರ್ನಾಟಕ ರಾಜ್ಯದಿಂದ ಬುನಾದಿ ಶುರುವಾಗಿದೆ. ನಾವೆಲ್ಲಾ ಸೇರಿ ಹೋರಾಟ ಮಾಡೋಣ. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನಿಮ್ಮೆಲ್ಲ ವಿಚಾರಗಳಿಗೆ ಬದ್ದವಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

### ಸಚಿವೆಯಾಗಿ ಮೊದಲ ಬಾರಿಗೆ ಧ್ವಜಾರೋಹಣ



**ಉಡುಪಿ :** ಲಕ್ಷ್ಮೀ ಹೆಬ್ಬಾಳ್ಕರ್ ಸಚಿವರಾಗಿ ಇದೇ ಮೊದಲ ಬಾರಿಗೆ ಧ್ವಜಾರೋಹರಣ ನೆರವೇರಿಸಿದರು. ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಇಂದು ಜಿಲ್ಲಾ ಕ್ರೀಡಾಂಗಣದಲ್ಲಿ 77ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಮೊದಲ ಬಾರಿಗೆ ಧ್ವಜಾರೋಹಣ ನೆರವೇರಿಸಿದರು.

## ತ್ಯಾಗ ಬಲಿದಾನಗೈದ ಪ್ರತಿಯೊಬ್ಬರು ಮಹನೀಯರು : ಬಿ.ವಿ. ತುಕರಾಂ



**ಚಿತ್ರದುರ್ಗ :** ಭಾರತದ 77 ನೇ ಸ್ವಾತ್ರಂತ್ರ್ಯೋತ್ಸವದ ದಿನದಂದು ಸ್ವಾತಂತ್ರ್ಯಕ್ಕಾಗಿ ತ್ಯಾಗ ಬಲಿದಾನಗೈದ ಪ್ರತಿಯೊಬ್ಬರು ಮಹನೀಯರನ್ನು ನೆನೆದು ಆತ್ಮಾವಲೋಕನಾ ಮಾಡಿಕೊಳ್ಳುವ ದಿನವಾಗಿದೆ ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ ತುಕಾರಾಂ ರಾವ್ ಹೇಳಿದರು.

ನಗರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಮಂಗಳವಾರ 77 ನೇ ಸ್ವಾತ್ರಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೇರವೇರಿಸಿ ಅವರು ಮಾತನಾಡಿದರು.

ದೇಶದ ಅಭಿವೃದ್ಧಿಗೆ ಎಲ್ಲರೂ ಶ್ರಮಪಟ್ಟು ತಮ್ಮ ತಮ್ಮ ಕರ್ತವ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಿ ದೇಶದ ಅಭಿವೃದ್ಧಿಗೆ ಕೈ ಜೋಡಿಸೋಣ ಎಂದರು.

ಈ ಸಂದರ್ಭದಲ್ಲಿ ಕಾರ್ಯನಿತರ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಬಿ. ಗೌಡಿಗೆರೆ, ಉಪಾಧ್ಯಕ್ಷ ಸಿ.ಪಿ.ಮಾರುತಿ, ಪ್ರಹ್ಲಾದ್, ವಾರ್ತಾ ಇಲಾಖೆ ಸಿಬ್ಬಂದಿಗಳಾದ ವೆಂಕಟೇಶ್, ವೇಣುಗೋಪಾಲ್, ಎಂ.ಜೆ.ಬೋರೇಶ್, ಚಂದ್ರಶೇಖರ್, ತಿಮ್ಮಶೆಟ್ಟಿ, ಅಂಜನ್ ಮೂರ್ತಿ ಹಾಗೂ ಅಪ್ರೆಂಟಿಸ್ ಅಭ್ಯರ್ಥಿಗಳಾದ ಎನ್.ಕರುಣಾಕರ, ಎನ್.ಆರ್. ರವಿಚಂದ್ರ ಇದ್ದರು.

## ಗ್ಯಾರಂಟಿ ಯೋಜನೆ ಜಾರಿಯಿಂದ ಸಾಮಾಜಿಕ ಬದಲಾವಣೆ

ಮೊದಲ ಪುಟದಿಂದ.. ಬಳಿಕ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸರ್ಕಾರದ ಯೋಜನೆಗಳ ಬಗ್ಗೆ ಹೊರತಂದಿರುವ "ಪ್ರಗತಿಪರ ಅಭಿವೃದ್ಧಿಗಾಗಿ– ನುಡಿದಂತೆ ನಡೆದಿದ್ದೇವೆ" ಎಂಬ ಕಿರುಹೊತ್ತಿಗೆಯನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು.

ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್, ಜಿಲ್ಲಾ ಪೊ?ಲಿಸ್ ಅಧೀಕ್ಷಕ ಕೆ.ಪರಶುರಾಮ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ಜನ ಪ್ರತಿನಿಧಿಗಳು, ವಿವಿಧ ಇಲಾಖೆಗಳ ನೌಕರರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಇದ್ದರು.

**ಆಕರ್ಷಕ ಪಥ ಸಂಚಲನ :** ಭಾರತ ಸ್ವಾತಂತ್ರ್ಯ ದಿನಾಚರಣೆಯ ಪಥ ಸಂಚಲನದಲ್ಲಿ ಡಿಎಆರ್ ಆರ್ಪಿಐ ಎಸ್.ಎಸ್.ಯುವರಾಜ ಅವರು ಕವಾಯತು ಸಮಾದೇಶಕರಾಗಿ ಕಾರ್ಯನಿರ್ವಹಿಸಿದರು.

ಸಶಸ್ತ್ರ ಮೀಸಲು ಪಡೆ, ನಾಗರೀಕ ಪೊಲೀಸ್, ಗೃಹ ರಕ್ಷಕದಳ, ಅಬಕಾರಿ ಇಲಾಖೆ, ಅರಣ್ಯ ಇಲಾಖೆ ತಂಡ, ಎನ್‌ಸಿಸಿ ಸೇರಿದಂತೆ ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳ ತಂಡ, ಪೊಲೀಸ್ ಬ್ಯಾಂಡ್ ತಂಡದಿಂದ ಆಕರ್ಷಕ ಪಥ ಸಂಚಲನ ಜರುಗಿತು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಗೌರವ ವಂದನೆ ಸ್ವೀಕರಿಸಿದರು.

**ದೇಶ ಪ್ರೇಮ ಅನಾವರಣಗೊಳಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳು :** ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ರಾಷ್ಟ್ರ ಧ್ವಜಾರೋಹಣ ತರುವಾಯ ಮಕ್ಕಳ ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ ದೇಶ ಪ್ರೇಮ ಅನಾವರಣಗೊಳಿಸಿದವು.

ನಗರದ ಸರ್ಕಾರಿ ಕೋಟೆ ಪ್ರೌಢಶಾಲೆಯ ಸುಮಾರು 150 ವಿದ್ಯಾರ್ಥಿಗಳು ಒನ್ ಟು ತ್ರೀ ನಮ್ಮ ಬಾವುಟದ ಬಣ್ಣ ತ್ರೀ... ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ನಂತರ ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಹಾಗೂ ಭಗತ್‌ಸಿಂಗ್ ಜೀವನ, ಹೋರಾಟ ಹಾಗೂ ಬಲಿದಾನದ ಕುರಿತಾದ ದೃಶ್ಯ ರೂಪಕ ನೋಡುಗರ ಮನಸೆಳೆಯಿತು.

ವಾಸವಿ ವಿದ್ಯಾಸಂಸ್ಥೆಯ 300 ಮಕ್ಕಳು ಸರ್ವಧರ್ಮ ಸಮನ್ವಯತೆ ಹಾಗೂ ಭಾವೈಕ್ಯತೆ ಸಾರುವ ನೃತ್ಯ ರೂಪಕ ಪ್ರದರ್ಶಿಸಿದರು. ವಿದ್ಯಾವಿಕಾಸ ವಿದ್ಯಾಸಂಸ್ಥೆಯ 700ಕ್ಕೂ ವಿದ್ಯಾರ್ಥಿಗಳು ಮಹಾತ್ವಾಕಾಂಕ್ಷೆ ಯೋಜನೆ ಚಂದ್ರಯಾನ–3 ಸಾಧನೆ ಹಾಗೂ ಸಾರೆ ಜಹಾಸೆ ಅಚ್ಛಾ ನೃತ್ಯ ರೂಪಕ ಪ್ರದರ್ಶಿಸಿದ್ದು, ಗಣ್ಯರ ಹಾಗೂ ಸಾರ್ವಜನಿಕರ ಮನ ಸೆಳೆಯುವಲ್ಲಿ ಯಶಸ್ವಿಯಾಯಿತು.

## ಬಸವಣ್ಣನವರ ತತ್ವಾದರ್ಶಗಳು ಉತ್ತಮ ಜೀವನಕ್ಕೆ ಮಾರ್ಗದರ್ಶನ



**ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯ ಖಾಸಗಿ ನಿವಾಸದಲ್ಲಿ ತಾಲ್ಲೂಕು ಬಸವದಳ ಹಮ್ಮಿಕೊಂಡಿದ್ದ ಪ್ರವಚನ ಕಾರ್ಯಕ್ರಮದಲ್ಲಿ ಎಐಟಿಯುಸಿ ಕಾರ್ಮಿಕ ಸಂಘಟನೆಯ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ ಮಾತನಾಡಿದರು.**

**ಚಳ್ಳಕೆರೆ :** ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಜೀವನದಲ್ಲಿ ಜಗಜ್ಯೋತಿ ಬಸವಣ್ಣನವರೂ ಸೇರಿದಂತೆ ಮಹಾನ್ ದಾರ್ಶನಿಕರ ತತ್ವಾದರ್ಶ ಹಾಗೂ ಧಾರ್ಮಿಕ ಚಿಂತನೆಗಳನ್ನು ಅಳವಡಿಸಿ ಕೊಳ್ಳುವ ಮೂಲಕ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕೆಂದು ಎಐಟಿಯುಸಿ ಕಾರ್ಮಿಕ ಸಂಘಟನೆಯ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ ತಿಳಿಸಿದರು.

ಅವರು, ಚಿತ್ರದುರ್ಗ ರಸ್ತೆಯ ಖಾಸಗಿ ನಿವಾಸದಲ್ಲಿ ತಾಲ್ಲೂಕು ಬಸವದಳ ಹಮ್ಮಿಕೊಂಡಿದ್ದ ಪ್ರವಚನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಬಸವದಳ ತಾಲ್ಲೂಕಿನಾದ್ಯಂತ ಜಗಜ್ಯೋತಿ ಬಸವೇಶ್ವರರ ತತ್ವಾದರ್ಶಗಳ ಬಗ್ಗೆ ನಿರಂತರ ಜಾಗೃತಿ ಮೂಡಿಸುತ್ತಿರುವುದು ಸಂತಸ ತಂದಿದೆ ಎಂದರು.

ಕಾರ್ಯ ಕ್ರಮದಲ್ಲಿ ನಗರ ಸಭಾ ಸದಸ್ಯೆ ಪಾಲಮ್ಮ, ವಾಣಿಜ್ಯೋದ್ಯಮಿ ಸಿ.ಎಸ್. ಪ್ರಸಾದ್, ವಿಮಲಮ್ಮ ತಿಪ್ಪೇಸ್ವಾಮಿ, ಸಮಾಜಸೇವಕ ಎಚ್.ಎಸ್. ಸೈಯದ್, ದೊಡ್ಡ ಉಳ್ಳಾರ್ತಿ ಕರಿಯಣ್ಣ ಮುಂತಾದವರು ಭಾಗವಹಿಸಿದ್ದರು.

## ದುಷ್ಟರ ಆಟಗಳು ಬಹಳ ಕಾಲ ನಡೆಯುವುದಿಲ್ಲ : ಸಿ.ಎಂ. ಸಿದ್ದರಾಮಯ್ಯ



**ಬೆಂಗಳೂರು :** ಶಾಂತಿಯುತ ಸಮಾಜವಿದ್ದರೆ ಮಾತ್ರ ಅಭಿವೃದ್ಧಿ ಸಾಧಿಸಲು ಸಾಧ್ಯವೆಂಬುದು ನಮ್ಮ ಜನರಿಗೆ ಅರ್ಥವಾಗಿರುವುದರಿಂದ ದುಷ್ಟರ ಆಟಗಳು ಬಹಳ ಕಾಲ ನಡೆಯುವುದಿಲ್ಲ ಎಂಬುದನ್ನು ಕರ್ನಾಟಕದ ಜನ ಸಾಬೀತು ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಪರೋಕ್ಷವಾಗಿ ಹಿಂದಿನ ಬಿಜೆಪಿ ಸರ್ಕಾರವನ್ನು ಟೀಕಿಸಿದರು.

ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ 77ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ. ಇಂದು ನಮ್ಮಲ್ಲಿಯೇ ಶೇ. 10ರಷ್ಟು ಜನರ ಶೇ.78ಕ್ಕಿಂತ ಹೆಚ್ಚಿನ ಪ್ರಮಾಣದ ಸಂಪತ್ತಿನ ಮೇಲೆ ಯಜಮಾನಿಕೆ ಹೊಂದಿದ್ದಾರೆ.

ಅದಕ್ಕಾಗಿಯೇ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಗೃಹಕ್ಷ್ಮಿ, ಯೋಜನೆಗಳನ್ನು ಜಾರಿಗೆತಂದಿದ್ದೇವೆ. ಅರ್ಥಶಾಸ್ತ್ರಜ್ಞ, ಅಮರ್ತ್ಯ ಸೇನ್ ಅವರ ಮಾತಿನಂತೆ ಅಭಿವೃದ್ಧಿಯೇ ಸ್ವಾತಂತ್ರ್ಯ ಎಂಬುದರಲ್ಲಿ ನಂಬಿಕೆ ಇಟ್ಟು ಈ ಯೋಜನೆಗಳನ್ನು ಅನುಷ್ಠಾನಮಾಡುತ್ತಿದ್ದೇವೆ ಎಂದರು. ರಾಜ್ಯದಲ್ಲಿ ಶಕ್ತಿ,ಅನ್ನಭಾಗ್ಯ, ಗೃಹಜ್ಯೋತಿ ಯೋಜನೆಗಳು ಜಾರಿಯಾಗಿವೆ.

ನಾವು ಸೃಷ್ಟಿಸಲು ಹೊರಟಿರುವ ಆಭಿವೃದ್ಧಿಯಲ್ಲಿ ರಾಜ್ಯದ ಸರಾಸರಿ 130 ಕೋಟಿ ಕುಟುಂಬಗಳಿಗೆ ಸೇರಿದ ಜನರು ಪಾಲ್ಗೊಳ್ಳುತ್ತಿದ್ದಾರೆ.ಈ ಕೋಟಿ ಕೋಟಿ ಜನರಿಗೆ ಮಧ್ಯವರ್ತಿಗಳ ಕಾಟವಿಲ್ಲದೆ ಸವಲತ್ತುಗಳು ನೇರವಾಗಿ ತಲುಪಲಿವೆ ಮತ್ತು ಸಮಗ್ರ ಮಹಿಳಾ ಸಶಕ್ತಿ ಕರಣ ರಾಜ್ಯವಾಗಲಿದೆ. ಇದ–ರಿಂದ ಕರ್ನಾಟಕ ಮಾದಿ ಅಭಿವೃದ್ಧಿ ವ್ಯಾಖ್ಯಾನವೂ ಪ್ರಾರಂಭವಾಗಿದೆ ಎಂದರು. ನಮ್ಮ ಸರ್ಕಾರವು ಹಿಂದಿನ ಸರ್ಕಾರಗಳಿಗಿಂತಲೂ ಹೆಚ್ಚಿನ ಸಂಪನ್ಮೂಲಗಳನ್ನು ಮೂಲಭೂತ ಸೌಕರ್ಯಗಳಿಗೆ ವಿನಿಯೋಗಿಸಲು ಬದ್ಧವಾಗಿದೆ.

ಸಂವಿಧಾನಶಿಲ್ಪಿ ಡಾ.ಅಂಬೇಡ್ಕರ್ ಅವರ ಆಶಯದಂತೆ ಸಮಸಮಾಜ ನಿರ್ಮಾಣಕ್ಕೆ ಒತು ನೀಡಿದೆ ಎಂದರು. ಅವಕಾಶ ವಂಚಿತ ಸಮುದಾಯಗಳ ಹಿತರಕ್ಷಣೆ ಹಾಗೂ ಅವರ ಅಭ್ಯುದಯ ನಮ್ಮ ಕಾಳಜಿಯಾಗಿದೆ. ಹಿಂದುಳಿದವರು ಪರಿಶಿಷ್ಟ ಜಾತಿ ಪಂಗಡದವರು ಅಲ್ಪಸಂಖ್ಯಾತರು ಮಹಿಳೆಯರು ಕಾರ್ಮಿಕರು ರೈತರು ಮತ್ತು ಶೋಷಿತ ವರ್ಗದವದ ಶ್ರೇಯೋಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಿದೆ ಎಂದರು. ಶಿಕ್ಷಣ ಮ್ತು ಆರೋಗ್ಯ ಕ್ಷೇತ್ರಗಳ ಮೂಲಭೂತ ಸೌಕರ್ಯ ಅಭಿವೃದ್ಧಿಗೂ ಸರ್ಕಾರ ಆದ್ಯತೆ ನೀಡಿದೆ.

ನಾಡಿನ ನೆಲಜಲ ಭಾರತ ಹಾಗೂ ಅಸ್ಮಿತೆಯನ್ನು ಕಾಪಾಡಲು ಸರ್ಕಾರ ಬದ್ಧವಾಗಿದೆ. ಹಾಗೆಯೇ ಮಹಾನ್ ಮಾನವತಾವಾದಿಗಳಾದ ಬುದ್ಧ, ಗಾಂಧೀಜಿ ಬಸವಣ್ಣ, ಅಂಬೇಡ್ಕರ್ ಕುವೆಂಪು ಮೊದಲಾದವರು ಪ್ರತಿಪಾದಿಸಿದ ಮಾನವೀಯತೆಯ ತಳಹದಿಯ ಅಭಿವೃದ್ಧಿ ಮಾದರಿಯನ್ನು ನಾವು ಅಳವಡಿಸಿಕೊಂಡಿದ್ದೇವೆ ಇದನ್ನು ಕರ್ನಾಟದ ಮಾದರಿ ಅಭಿವೃದ್ಧಿ ಎಂದು ಕರೆಯಲಾಗುತ್ತದೆ. ಮನುಷ್ಯ ಜಾತಿ, ತಾನೊಂದೆ ವಲಂ ಎಂಬ ಕಂಪನ ಮಾತುಗಳು ಸಮಸ್ತ ಜನಕೋಟಿಯ ಘೋಷ ವಾಕ್ಯವಾಗಲಿ ಎಂದು ಮುಖ್ಯಮಂತ್ರಿಗಳು ಹೇಳಿದರು.

## ಫಾಸ್ಟ್ ನ್ಯೂಸ್

### ಶೀಘ್ರದಲ್ಲೇ ನೀರಾವರಿ ಯೋಜನೆ ಪೂರ್ಣ

**ವಿಜಯಪುರ :** ನಾಡಿನ ಜನತೆಗೆ 77ನೇ ಸ್ವಾತಂತ್ರ್ಯೋತ್ಸವದ ಶುಭಾಷಯಗಳು. ಅನೇಕ ಮಹನಿಯರ ತ್ಯಾಗ, ಬಲಿದಾನದಿಂದ ನಮಗೆ ಸ್ವಾತಂತ್ರ್ಯ ಸಿಕ್ಕಿದೆ. ಎಲ್ಲ ಸ್ವಾತಂತ್ರ್ಯ ಹೋರಾಟಗಾರರಿಗೂ ನಮನ. ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಐದು ಗ್ಯಾರೆಂಟಿಗಳಲ್ಲಿ ಈಗಾಗಲೇ ನಾಲ್ಕು ಗ್ಯಾರೆಂಟಿಗಳನ್ನು ಜಾರಿಗೆ ತಂದಿದ್ದೇವೆ. ಶಕ್ತಿ ಯೋಜನೆ, ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ ಜಾರಿಗೆ ಬಂದಿವೆ. ಕೇಂದ್ರ ಸರ್ಕಾರದ ಅಸಹಕಾರ ನೀತಿಯಿಂದ 10 ಕೆಜಿ ಅಕ್ಕಿ ಕೊಡಲು ಆಗದೆ ಇದ್ದಿದ್ದರಿಂದ 5ಕೆಜಿ ಅಕ್ಕಿಯ ಹಣವನ್ನು ಫಲಾನುಭವಿಗಳ ಖಾತೆಗೆ ಹಾಕಲಾಗುತ್ತಿದೆ ಇದಕ್ಕಾಗಿ ವಿಜಯಪುರ ಜಿಲ್ಲೆಯಲ್ಲೇ 20ಕೋಟಿ ಹಣವನ್ನು ಬಿಡುಗಡೆ ಮಾಡಲಾಗಿದೆ. ಜಿಲ್ಲೆಯಲ್ಲಿನ ವಿಮಾನ ನಿಲ್ದಾಣ ಆದಷ್ಟು ಬೇಗ ಲೋಕಾರ್ಪಣೆಗೊಳ್ಳಲಿದೆ. ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ಎಂದು ಸಚಿವ ಎಂಬಿ ಪಾಟೀಲ್ ಹೇಳಿದರು.

### ರಾಜಭವನದಲ್ಲಿ ಧ್ವಜಾರೋಹಣ

**ಬೆಂಗಳೂರು :** ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ರಾಜಭವನದಲ್ಲಿ ಧ್ವಜಾರೋಹಣ ನೆರವೇರಿಸಿದರು. ಇದಕ್ಕೂ ಮುಂಚೆ ಮಹಾತ್ಮ ಗಾಂಧೀಜಿ ಮತ್ತು ಡಾ. ಅಂಬೇಡ್ಕರ್ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿದರು. ಮುಖ್ಯ ಭದ್ರತಾ ಅಧಿಕಾರಿ ಎಸಿಪಿ ನಿಂಗಾರೆಡ್ಡಿ ನೇತೃತ್ವದ ಪೊಲೀಸ್ ತಂಡದಿಂದ ರಾಜ್ಯಪಾಲರಿಗೆ ಗೌರವ ರಕ್ಷೆ ನೀಡಿದರು.

### ಗಡಿನಾಡಿನಲ್ಲಿ ಸ್ವಾತಂತ್ರ್ಯ ದಿನಾಚರಣೆಯ

**ಆನೇಕಲ್ :** ಗಡಿನಾಡಿನಲ್ಲಿ 77 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಆನೇಕಲ್ ಪಟ್ಟಣದ ಎಎಸ್ಬಿ ಕ್ರೀಡಾಂಗಣದಲ್ಲಿ ತಹಶಿಲ್ದಾರ್ ಶಶಿಧರ್ ಮಾಡ್ಯಾಳ್ ಧ್ವಜಾರೋಹಣ ನೆರವೇರಿಸಿದರು. ಸ್ಥಳೀಯ ಶಾಸಕ ಬಿ ಶಿವಣ್ಣ ಉಪಸ್ಥಿತರಿದ್ದರು. ಶಾಲಾ ಮಕ್ಕಳಿಂದ ಪಥ ಸಂಚಲನದ ಮೂಲಕ ಗಣ್ಯರಿಗೆ ಗೌರವ ವಂದನೆ ಸಲ್ಲಿಸಲಾಯಿತು.

### ಕನ್ನಡ ಭಾಷೆಯಲ್ಲೇ ಕವಾಯತು ಆಜ್ಞೆ

**ಚಾಮರಾಜನಗರ :** ಚಾಮರಾಜನಗರದಲ್ಲಿ ನಡೆದ ಸ್ವಾತಂತ್ರ್ಯೋತ್ಸವದಲ್ಲಿ ಕನ್ನಡ ಡಿಂಡಿಮ ಮೊಳಗಿದೆ. ಚಾಮರಾಜನಗರ ಪೊಲೀಸರು ಕನ್ನಡ ಭಾಷೆಯಲ್ಲೇ ಕವಾಯತು ಆಜ್ಞೆ ನೀಡಿದ್ದಾರೆ. ಕವಾಯತು ಸಂದರ್ಭದಲ್ಲಿ ಪೊಲೀಸರಿಂದ ಕನ್ನಡ ಬಳಕೆಗೆ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ.

### ಉಸ್ತುವಾರಿ ಸಚಿವಧ್ವಜಾರೋಹಣ

**ಬಳ್ಳಾರಿ :** 77 ಸ್ವಾತಂತ್ರ್ಯೋತ್ಸವ ಹಿನ್ನೆಲೆ ಬಳ್ಳಾರಿಯ ವಿಮ್ಸ್ ಕ್ರೀಡಾಂಗಣದಲ್ಲಿ ಮೊದಲ ಬಾರಿಗೆ ಉಸ್ತುವಾರಿ ಸಚಿವ ನಾಗೇಂದ್ರ ಧ್ವಜಾರೋಹಣ ನೆರವೇರಿಸಿದರು. ಪೊಲೀಸ್, ಎನ್ ಸಿ ಸಿ ಸೇರಿದಂತೆ ವಿವಿಧ ತುಕಡಿಗಳ ಪರಿವೀಕ್ಷಣೆ ಮಾಡಿದರು. ಬಳಿಕ 20 ಹೆಚ್ಚು ವಿವಿಧ ತುಕಡಿಗಳಿಂದ ಸಚಿವರಿಗೆ ಗೌರವ ಸಮರ್ಪಣೆ ಮಾಡಲಾಯಿತು.

### ಬಂಡವಾಳಿಗರ ಬಳಿ ಸಂಪತ್ತು ಶೇಖರಣೆ

**ಬೆಂಗಳೂರು :** ಬ್ರಿಟಿಷ್ ಭಾರತದಲ್ಲಿ ನಮ್ಮ ದೇಶದ ಸಂಪತ್ತನ್ನು ಬ್ರಿಟಿಷರು ಹೊತ್ತೂಯ್ದರು. ಆದರೆ ಇಂದು ನಮ್ಮಲ್ಲಿ ಕೆಲವೇ ದೊಡ್ಡ ಬಂಡವಾಳಿಗರ ಬಳಿ ಸಂಪತ್ತು ಶೇಖರಣೆಗೊಳ್ಳುತ್ತಿದೆ. ಈ ರೀತಿಯಾದರೆ, ಅಭಿವೃದ್ಧಿ ಸಾಧ್ಯವೆ ಕುವೆಂಪು ಅವರು ತಮ್ಮದೊಂದು ಪದ್ಯದಲ್ಲಿ ಕವಿ ಕುವೆಂಪು ಅವರು ಕತ್ತಿ ಪರದೇಶಿಯಾದರೆ ಮಾತ್ರ ನೋವೆ ನಮ್ಮವರೆ ಹದಹಾಕಿ ತಿವಿದರದು ಹೂದೆ" ಎಂದು ಪ್ರಶ್ನಿಸಿದ್ದಾರೆ. ಇದನ್ನೆಲ್ಲ ಮನಗಂಡೆ. ನಾವು ಸಂಪತ್ತಿನ ಸಂಗ್ರಹ ಮತ್ತು ಹಂಚಿಕ ಹಾಗೂ ಮರುಹಂಚಿಕೆಗಳಲ್ಲಿ ಸಾಮಾಜಿಕ ನ್ಯಾಯವನ್ನು ಪಾಲಿಸುತ್ತಿದ್ದೇವೆ. ಅದಕ್ಕಾಗಿಯೇ ನಾವು ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮಿ ಹಾಗೂ ಯುವನಿಧಿ '5 ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಅರ್ಥಶಾಸ್ತ್ರಜ್ಞ ಅಮರ್ತ್ಯಸೇನ್ ಅವರ ಪ್ರಮೇಯವಾದ ಅಭಿವೃದ್ಧಿಯ ಸ್ವಾತಂತ್ರ್ಯ ಎಂಬುದರಲ್ಲಿ ನಂಬಿಕೆಯಿಟ್ಟು ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದ್ದೇವೆ ಎಂದರು.

### ಕೈಗಾರಿಕೆಗಳ ಸ್ಥಾಪನೆ – ಉದ್ಯೋಗ : ಸಿಎಂ

**ಬೆಂಗಳೂರು :** ಕೃಷಿ, ತೋಟಗಾರಿಕೆ ಉತ್ತೇಜನಕ್ಕೆ ರಾಜ್ಯ ಸರ್ಕಾರದಿಂದ ಅನುದಾನ ನೀಡಲಾಗುವುದು. ಕೌಶಲ್ಯಾಭಿವೃದ್ಧಿ ಯೋಜನೆ ಮೂಲಕ ಯುವಕರಿಗೆ ತರಬೇತಿ ನೀಡಲಾಗುವುದು. ಕೈಗಾರಿಕೆ ಕ್ಷೇತ್ರದಲ್ಲಿ ಮತ್ತಷ್ಟು ಉತ್ತೇಜನ ನೀಡಲಾಗುತ್ತೆ. ಮೈಸೂರು, ಮಂಗಳೂರು, ಧಾರವಾಡ–ಹುಬ್ಬಳ್ಳಿ, ಬಳ್ಳಾರಿ ಮತ್ತು ಕಲಬುರಗಿ ಜಿಲ್ಲೆಯಲ್ಲಿ ಕೈಗಾರಿಗಳ ಸ್ಥಾಪನೆಗೆ ನಿರ್ಧಾರ ಕೈಗೊಳ್ಳಲಾಗಿದೆ. ಕೈಗಾರಿಕಾ ವಲಯಗಳ ನಡುವೆ ಸಂಪರ್ಕಿಸಲು ರಸ್ತೆ ನಿರ್ಮಾಣ ಮಾಡಲಾಗುವುದು. ಕೈಗಾರಿಕೆಗಳ ಸ್ಥಾಪನೆ ಮೂಲಕ ಉದ್ಯೋಗ ಸೃಷ್ಟಿಗೆ ಕ್ರಮ ಕೈಗೊಳ್ಳಲಾಗಿದೆ.

### ವಿಜಯಪುರದಲ್ಲಿ ಧ್ವಜಾರೋಹಣ

**ವಿಜಯಪುರ :** 77ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ವಿಜಯಪುರ ನಗರದ ಡಾ ಬಿ ಆರ್ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಸಚಿವ ಎಂಬಿ ಪಾಟೀಲ್ ಧ್ವಜಾರೋಹಣ ನೆರವೇರಿಸಿದರು.

# ಕವಾಡಿಗರಹಟ್ಟಿ ಅಭಿವೃದ್ಧಿಗೆ 4 ಕೋಟಿ ರೂ. ಅನುದಾನ ಮಂಜೂರು – ಡಿ. ಸುಧಾಕರ್



**ಚಿತ್ರದುರ್ಗ :** ಕವಾಡಿಗರಹಟ್ಟಿಯಲ್ಲಿ ಇತ್ತೀಚೆಗೆ ಜರುಗಿದ ಅಹಿತಕರ ಘಟನೆ ಬಳಿಕ, ಇಲ್ಲಿನ ಸಮಸ್ಯೆಗಳನ್ನು ನಿವಾರಿಸಲು ಕವಾಡಿಗರ ಹಟ್ಟಿಯಲ್ಲಿ ಮೂಲಭೂತ ಸೌಕರ್ಯಗಳಿಗಾಗಿ ಸರ್ಕಾರ 04 ಕೋಟಿ ರೂ. ಅನುದಾನ ಮಂಜೂರು ಮಾಡಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕವಾಡಿಗರ ಹಟ್ಟಿಯಲ್ಲಿ ಇತ್ತೀಚೆಗೆ ಕಲುಷಿತ ನೀರಿನಿಂದ ಸಂಭವಿಸಿದ ಅಹಿತಕರ ಘಟನೆ ಸಂಬಂಧ, ಇಲ್ಲಿನ ಸಮಸ್ಯೆಗಳ ನಿವಾರಣೆಗೆ ಹಾಗೂ ಮೂಲಭೂತ ಸೌಕರ್ಯಗಳಾದ ಒಳಚರಂಡಿ ವ್ಯವಸ್ಥೆ, ಶುದ್ಧ ಕುಡಿಯುವ ನೀರಿನ ಘಟಕ, 2.5 ಲಕ್ಷ ಲೀ. ಸಾಮರ್ಥ್ಯದ ಓವರ್ ಹೆಡ್ ಟ್ಯಾಂಕ್, ಹೊಸದಾಗಿ ನಳದ ಸಂಪರ್ಕ ಮುಂತಾದ ಅಭಿವೃದ್ಧಿ ಕಾರ್ಯಗಳಿಗಾಗಿ ಸರ್ಕಾರದ ನಗರಾಭಿವೃದ್ಧಿ ಇಲಾಖೆಯು 04 ಕೋಟಿ ರೂ. ಮಂಜೂರು ಮಾಡಿದ್ದು, ಶೀಘ್ರದಲ್ಲೇ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ಅಲ್ಲದೆ ಇಲ್ಲಿ ಪರಿಶಿಷ್ಟರೇ ಹೆಚ್ಚು ವಾಸವಿರುವುದರಿಂದ, ವಸತಿ ರಹಿತರಿಗೆ ಹೊಸದಾಗಿ ಮನೆ ಮಂಜೂರು ಮಾಡಲು ಸಹ ಸಮಾಜ ಕಲ್ಯಾಣ ಇಲಾಖೆ ಮುಂದಾಗಿದೆ, ಈ ಕುರಿತು ಸಮಾಜ ಕಲ್ಯಾಣ ಸಚಿವರೊಂದಿಗೆ ಚರ್ಚಿಸಲಾಗಿದೆ. ಸಾಮೂಹಿಕ ಶೌಚಾಲಯ ಹಾಗೂ ವೈಯಕ್ತಿಕ ಶೌಚಾಲಯಗಳನ್ನು ಕೂಡ ನಿರ್ಮಿಸಲು ಕ್ರಮ ವಹಿಸಲಾಗುವುದು ಎಂದರು.

ಮನೆಯ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2000 ರೂ. ಆರ್ಥಿಕ ಪ್ರೋತ್ಸಾಹ ನೀಡುವ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ "ಗೃಹಲಕ್ಷ್ಮೀ" ಯೋಜನೆಗೆ ಇದೇ ಆ. 27 ರಂದು ಚಾಲನೆ ನೀಡಲಾಗುವುದು. ರಾಜ್ಯ ಮಟ್ಟದಲ್ಲಿ ಬೆಳಗಾವಿಯಲ್ಲಿ ಮುಖ್ಯಮಂತ್ರಿಗಳು ಚಾಲನೆ ನೀಡಿದರೆ, ಉಳಿದಂತೆ ಎಲ್ಲ ಜಿಲ್ಲಾ, ತಾಲ್ಲೂಕು, ಗ್ರಾಮ ಮಟ್ಟದಲ್ಲಿಯೂ ಯೋಜನೆಯನ್ನು ಜಾರಿಗೊಳಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಜಿಲ್ಲೆಯಲ್ಲಿ ಒಟ್ಟು 3,47,620 ಫಲಾನುಭವಿಗಳು ಅಂದರೆ ಶೇ. 87 ರಷ್ಟು ನೊಂದಣಿ ಮಾಡಿಸಿಕೊಂಡಿದ್ದು, ಇಡೀ ರಾಜ್ಯದಲ್ಲಿಯೇ ನಮ್ಮ ಜಿಲ್ಲೆ ಎರಡನೆ ಸ್ಥಾನದಲ್ಲಿದೆ. ಅಂದು ಯೋಜನೆಯ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯ ಮಂಜೂರಾಗಲಿದ್ದು, ಈ ಕುರಿತು ಫಲಾನುಭವಿಗಳ ಮೊಬೈಲ್‌ಗೆ ಸಂದೇಶ ರವಾನೆಯಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಹೇಳಿದರು.

ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿಲ್ಲಾ ಪಂಚಾಯತ್ ಸಿಇಒ ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ. ಪರಶುರಾಮ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೇರಿದಂತೆ ವಿವಿಧ ಅಧಿಕಾರಿಗಳು, ಗಣ್ಯರು ಇದ್ದರು.

## ಸ್ವಾತಂತ್ರ್ಯ ಮತ್ತು ಭೂಮಿಯ ಮೇಲಿನ ಪ್ರೀತಿಯ ಭಾವನೆ : ಪ್ರಭುಸ್ವಾಮಿ



**ನಾಯಕನಹಟ್ಟಿ :** ನಮ್ಮ ದೇಶದ ಒಂದು ಭಾಗದಿಂದ ಇನ್ನೊಂದು ಭಾಗಕ್ಕೆ ಎಲ್ಲಾರು ಜೈ ಭಾರತ ಮಾತಕಿ ಎಂದು ಕೂಗುತ್ತಿದ್ದಾರೆ. ಇದು ನಿಜವಾಗಿಯೂ ಸ್ವಾತಂತ್ರ್ಯ ಮತ್ತು ಭೂಮಿಯ ಮೇಲಿನ ಪ್ರೀತಿಯ ಭಾವನೆಯಾಗಿದೆ. ಎಂದು ಎಸ್.ಟಿ.ಎಸ್. ಆರ್.ಹೆಚ್.ಎಸ್ ಅಧ್ಯಕ್ಷರಾದ ಪ್ರಭುಸ್ವಾಮಿ ಹೇಳಿದರು.

ನಾಯಕನಹಟ್ಟಿ ಪಟ್ಟಣದ ಎಸ್.ಟಿ.ಎಸ್. ಆರ್.ಹೆಚ್.ಎಸ್ ಶಾಲೆಯಲ್ಲಿ 77ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು ಆದರೆ ನಮ್ಮೆಲ್ಲರಿಗೂ ಗೊತ್ತು ಈ ಸ್ವಾತಂತ್ರ್ಯ ಕಷ್ಟ ಇವರೆಲ್ಲರ ಹಿಂದೆ ದಶಕಗಳ ತ್ಯಾಗ ಮತ್ತು ಹೋರಾಟ ಅಡಗಿದೆ. ನಾವು ಉಸಿರಾಡುವ ಭೂಮಿ ಪ್ರಸಿದ್ಧ ಮಹಾ ಪುರುಷರ ನೇತೃತ್ವದ ನಮ್ಮ ಮಹಾ ಪುರುಷರ ಹೋರಾಟದಿಂದಾಗಿ ಮಹಾತ್ಮ ಗಾಂಧೀಜಿ, ಜವಹರ್‌ಲಾಲ್ ನೆಹರು, ಸುಭಾಷ್ ಚಂದ್ರ ಬೋಸ್ ಮತ್ತು ಇನ್ನೂ ಇತರರು ಸ್ವಾತಂತ್ರ್ಯದ ಒಂದು ಕೊಡುಗೆಯಾಗಿದ್ದಾರೆ. ಮಹಾತ್ಮ ಗಾಂಧೀಜಿಯವರ ಆಹಿಂಸೆ ಹೋರಾಟದಿಂದ ನಮಗೆ ಸ್ವಾತಂತ್ರ್ಯ ಸಿಕ್ಕಿದೆ. ಜನರ ಹಕ್ಕುಗಳಿಗಾಗಿ ಅವರು ಬಂಡೆಯಂತೆ ನಿಂತರು. ಅವರು ಹಲವಾರು ಬಾರಿ ಜೈಲು ಪಾಲಾದರು. ಅನೇಕ ತೊಂದರೆಗಳನ್ನು ಎದುರಿಸಿದರು ಎಂದು ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ಶ್ರೀಗುರು ತಿಪ್ಪೇರುದ್ರಸ್ವಾಮಿ ಶಾಲೆಯ ಅಧ್ಯಕ್ಷರಾದ ಪ್ರಭುಸ್ವಾಮಿ, ಕಾರ್ಯದರ್ಶಿ ಎಂ.ವೈ.ಟಿ.ಸ್ವಾಮಿ, ಜಂಟಿ ಕಾರ್ಯದರ್ಶಿ ಚಂದ್ರಶೇಖರ್, ನಾಗರಾಜ್ ಖಜಾಂಚಿ, ಮುಖ್ಯೋಪಾಧ್ಯಯರಾದ ಬಿ.ರಮೇಶ್, ಎಸ್.ಟಿ.ಎಸ್.ಆರ್ ಆಂಗ್ಲ ಮಾದ್ಯಮ ಶಾಲೆಯ ಮುಖ್ಯೋಪಾಧ್ಯಯರಾದ ಶ್ರೀಮತಿ ತಿಪ್ಪಮ್ಮ, ಶ್ರೀನಿವಾಸ್, ಹಾಗೂ ಶಾಲೆಯ ಶಿಕ್ಷಕರು, ಶಿಕ್ಷಕಿಯರು, ಶಾಲೆ ವಿದ್ಯಾರ್ಥಿಗಳು ಹಾಗೂ ಇನ್ನೂ ಇತರರು ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

## ಹಣಕ್ಕೆ ಹೆಚ್ಚು ಮಹತ್ವ : ಜಯರಾಂಬಾಬು

**ಹೊಸದುರ್ಗ :** ಮನುಷ್ಯ ಇಂದು ಹೆಚ್ಚಾಗಿ ಹಣಕ್ಕೆ ಮಹತ್ವ ಕೊಡುತ್ತಿದ್ದಾನೆ, ಆದರೆ ಅವನ ಆರೋಗ್ಯಕ್ಕೆ ಹೆಚ್ಚು ಮಹತ್ವ ಕೊಡುತ್ತಿಲ್ಲ ಎಂದು ರೋಟರಿ ಕ್ಲಬ್ ಮಿಲ್ಲೆಟ್ಸ್ ಅಧ್ಯಕ್ಷ ಜಯರಾಂಬಾಬು ಅಭಿಪ್ರಾಯ ವ್ಯಕ್ತಪಡಿಸಿದರು.

ಸಹ್ಯಾದ್ರಿ ನಾರಾಯಣ ಮೆಲ್ಟಿಸ್ಪೆಷಾಲಿಟಿ ಆಸ್ಪತ್ರೆ ಶಿವಮೊಗ್ಗ ರೋಟರಿ ಕ್ಲಬ್ ಮಿಲ್ಲೆಟ್ಸ್ ಮತ್ತು ಕಮ್ಮವಾರಿ ಸಂಘ, ಹೊಸದುರ್ಗ ತಾಲೂಕು ಹಾಗೂ ಬಲ್ಲಾಳ ಸಮುದ್ರ ಹಾಲು ಉತ್ಪಾದಕರ ಕೋ.ಆಪರೇಟಿವ್ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ತಾಲೂಕಿನ ಬಲ್ಲಾಳ ಸಮುದ್ರ ಗ್ರಾಮದ ಡೈರಿ ಕಟ್ಟಡದಲ್ಲಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಮುನುಷ್ಯನಿಗೆ ಮುಖ್ಯವಾಗಿ ಬೇಕಾಗಿರುವುದು ಆರೋಗ್ಯ ಆರೋಗ್ಯದ ಬಾಗ್ಯದ ಮುಂದೆ ಎಲ್ಲಾ ಭಾಗ್ಯಗಳೂ ಸಹಾ ಶೂನ್ಯ ಅಶಕ್ತರು. ಬಡವರು, ನಿಸ್ಸಾಯಕರು ಕಡು ಬಡತನದವರು ಆರ್ಥಿಕತೆಯಿಂದ ಹಿಂದಿರುವವರು ನಮ್ಮ ಸಂಸ್ಥೆಯ ಗಮನಕ್ಕೆ ತಂದರೆ ಅಂತವರಿಗೆ ಸಂಪೂರ್ಣವಾಗದ ಸಹಕಾರ ನೀಡಲು ನಾವು ಬದ್ಧರಾಗಿದ್ದೇವೆ ಎಂಬ ಆಶ್ವಾಸನೆ ನೀಡಿದ ಅವರು ರಕ್ತದಾನದಿಂದ ತೊಂದರೆಯಲ್ಲಿರುವ ಅಮೂಲ್ಯವಾದ ಜೀವಗಳನ್ನ ಉಳಿಸಿಕೊಳ್ಳಬಹುದು ರಕ್ತ ನೀಡುವುದರಿಂದ ಮನು?ೃ ಆರೋಗ್ಯವಾಗಿರುತ್ತಾನೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ರವಿಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಮಿಲ್ಲೆಟ್ಸ್ ಕಾರ್ಯದರ್ಶಿ ಸತೀಶ್ ಟಿ.ಎಂ.ಖಜಾಂಚಿ ಪಿ.ಸುನೀಲ್‌ಕುಮಾರ್, ಸಂಪರ್ಕಾಧಿಕಾರಿ ಗುರುರಾಜ್‌ದೇಶಪಾಂಡೆ, ಕಮ್ಮವಾರಿ ಸಂಘದ ಅಧ್ಯಕ್ಷ ಕೆ.ಬಾಲರಾಜ್, ಕಾರ್ಯದರ್ಶಿ ನಂಜುಂಡಸ್ವಾಮಿ, ಬಲ್ಲಾಳ ಸಮುದ್ರ ಹಾಲು ಉತ್ಪಾದಕರ ಕೋ.ಆಪರೇಟಿವ್ ಸೊಸೈಟಿ ಅಧ್ಯಕ್ಷ ಜಿ.ವಿ.ಸ್ವಾಮಿ (ತಾರಾನಾಥ್) ಕಾರ್ಯದರ್ಶಿ ಅಮೃತಗುರುಮೂರ್ತಿ, ಆಸ್ಪತ್ರೆ ಮಾರ್ಕೆಟಿಂಗ್ ಅಧಿಕಾರಿ ಗಣೇಶ್ ವೈದ್ಯಾಧಿಕಾರಿಗಳಾದ ಡಾ. ಕೀರ್ತನ, ಡಾ.ಉಷಾ ಹಾಗೂ ತಂಡದವರು ಉಪಸ್ಥಿತರಿದ್ದರು.

## ಶಿಕ್ಷಣದಿಂದ ದೇಶದ ಅಭಿವೃದ್ಧಿ : ಎಂ.ಚಂದ್ರಪ್ಪ



**ಹೊಳಲ್ಕೆರೆ :** ಶಿಕ್ಷಣಕ್ಕೆ ಒತ್ತು ಕೊಡದಿದ್ದರೆ ದೇಶ ಅಭಿವೃದ್ಧಿ ಆಗುವುದಿಲ್ಲ ಎಂಬುದನ್ನು ಮನಗಂಡು ತಾಲ್ಲೂಕಿನಾದ್ಯಂತ ಬೆಟ್ಟ ಗುಡ್ಡಗಳನ್ನು ಆಯ್ಕೆ ಮಾಡಿಕೊಂಡು ಹಸಿರು ಪರಿಸರದಲ್ಲಿ ಅನೇಕ ವಸತಿ ಶಾಲೆ. ಹಾಸ್ಟೆಲ್‌ಗಳನ್ನು ಆರಂಭಿಸಲಾಗಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಪಟ್ಟಣದ ಕೊಟ್ರೆ ನಂಜಪ್ಪ ಪದವಿ ಪೂರ್ವ ಕಾಲೇಜು ಆವರಣದಲ್ಲಿ 77 ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿ ಅನೇಕ ಮಹನೀಯರು, ಹಿರಿಯರು ಪ್ರಾಣ ತ್ಯಾಗ ಮಾಡಿರುವುದನ್ನು ಈ ದಿನದಂದು ಸ್ಮರಿಸಿಕೊಳ್ಳಬೇಕು. ಆಗ ಮಾತ್ರ ಸ್ವಾತಂತ್ರ್ಯ ದಿನಾಚರಣೆಗೆ ನಿಜವಾದ ಅರ್ಥ ಸಿಗುತ್ತದೆ ಎಂದು ನುಡಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹಾಸ್ಟೆಲ್‌ಗಳನ್ನು ತೆರೆಯಲಾಗಿದೆ. ಬಸ್, ಕಂಪ್ಯೂಟರ್, ಸ್ಮಾರ್ಟ್ ಕ್ಲಾಸ್ ಸೇರಿದಂತೆ ಮಧ್ಯಾಹ್ನದ ಬಿಸಿಯೂಟ, ಸಮವಸ್ತ್ರ, ಶೂ ಇನ್ನು ಅನೇಕ ಮೂಲಭೂತ ಸೌಕರ್ಯಗಳನ್ನು ಸರ್ಕಾರ ಒದಗಿಸುತ್ತಿದೆ. ಶಿಕ್ಷಣದಿಂದ ಮಾತ್ರ ಬಡತನವನ್ನು ಹೋಗಲಾಡಿಸಲು ಸಾಧ್ಯ ಎಂದು ತಿಳಿಸಿದರು.

ದೇಶದ ಪ್ರಧಾನಿ ನರೇಂದ್ರಮೋದಿಗೆ ಪ್ರಪಂಚದಲ್ಲಿಯೇ ಗೌರವ ಸಿಗುತ್ತಿದೆ. ಇದು ಅವರೊಬ್ಬರಿಗಲ್ಲ. ಭಾರತದ ಪ್ರತಿ ಪ್ರಜೆಗೂ ಸಲ್ಲುವ ಗೌರವ. 29 ವರ್ಷಗಳಿಂದಲೂ ಜನ ಸೇವೆಯಲ್ಲಿ ತೊಡಗಿಕೊಂಡಿದ್ದೇನೆ. ರಾಜ–ಕಾರಣಿಗೆ ಸ್ವಾರ್ಥವಿರಬಾರದು. ಆಗ ಮಾತ್ರ ಮತ ನೀಡಿ ಗೆಲ್ಲಿಸಿದವರ ಋಣ ತೀರಿಸಬಹುದು ಎಂದರು.

ಕ್ಷೇತ್ರಾದ್ಯಂತ ನನ್ನ ಅಭಿವೃದ್ಧಿ ಕೆಲಸಗಳನ್ನು ನೋಡಿ ಮೂರು ವಿಶ್ವವಿದ್ಯಾನಿಲಯದ ಕುಲಪತಿಗಳು ಸರ್ಕಾರಕ್ಕೆ ವರದಿ ನೀಡಿದ್ದ–ರಿಂದ ರಾಜ್ಯಪಾಲರು ನನಗೆ ಗೌರವ ಡಾ–ಕ್ಟರೇಟ್ ನೀಡಿದ್ದಾರೆ. ನಾನು ಯಾವುದೇ ಗೌರವ ಸಿಗುತ್ತದೆಂದು ಆಸೆ ಪಟ್ಟು ಕೆಲಸ ಮಾಡುವವನಲ್ಲ. ಜನರ ಬೇಕು ಬೇಡಗಳನ್ನು ತಿಳಿದು ದಿನದ 24 ಗಂಟೆಯೂ ಅಭಿವೃದ್ಧಿ ಕೆಲಸ ಮಾಡುವುದಷ್ಟೆ ನನ್ನ ಗುರಿ. ಆತ್ಮಸಾಕ್ಷಿಗೆ ಹೆದರಿ ಕೆಲಸ ಮಾಡುತ್ತಿದ್ದೇನೆಂದು ಹೇಳಿದರು.

ಒಂದು ಮನೆಯಲ್ಲಿ ಒಬ್ಬರು ಶಿಕ್ಷಣವಂತರಾದರೆ ಇಡಿ ಕುಟುಂಬವನ್ನೇ ಮೇಲಕ್ಕೆತ್ತಬಹುದು. ಅದಕ್ಕಾಗಿ ಶಿಕ್ಷಣಕ್ಕೆ ಸರ್ಕಾರ ಕೂಡ ಹೆಚ್ಚಿನ ಒತ್ತು ಕೊಡುತ್ತಿದೆ. ಈ ನಿಟ್ಟನಲ್ಲಿ ವಿದ್ಯಾರ್ಥಿಗಳು ಓದಿನ ಕಡೆ ಗಮನ ಕೊಟ್ಟು ಶಿಕ್ಷಣವಂತರಾಗುವ ಮೂಲಕ ಗುರು–ಹಿರಿಯರು, ಪೋಷಕರಿಗೆ ಕೀರ್ತಿ ತರಬೇಕೆಂದರು.

ಹೊಳಲ್ಕೆರೆ ತಹಶೀಲ್ದಾರ್ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ರವಿಕುಮಾರ್ ಎನ್. ಪುರಸಭೆ ಸದಸ್ಯರುಗಳು ಹಾಗೂ ನೌಕರ ವರ್ಗದವರು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಸ್ವಾತಂತ್ರ್ಯ ಹೋರಾಟಗಾರರು, ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಿದ್ದರು.

## ಪ್ರತಿಯೊಬ್ಬರು ದೇಶಾಭಿಮಾನ ಬೆಳೆಸಿಕೊಳ್ಳಬೇಕು




**ಹೊಳಲ್ಕೆರೆ :** ಈ ಮಣ್ಣಿನಲ್ಲಿ ಹುಟ್ಟಿದ ಪ್ರತಿಯೊಬ್ಬರು ದೇಶಾಭಿಮಾನ ಬೆಳೆಸಿಕೊಳ್ಳಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಭಾರತದ 77 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಪುರಸಭೆ ಕಾರ್ಯಾಲಯ ಹಾಗೂ ಯುವಜನ ಕ್ರೀಡಾ ಇಲಾಖೆ, ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನನ್ನ ಮಣ್ಣು ನನ್ನ ದೇಶ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದ ಸ್ವಾತಂತ್ರಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿ ಅನೇಕ ಮಹನೀಯರು ಪ್ರಾಣತ್ಯಾಗ ಮಾಡಿದ್ದಾರೆ. ಅಂತಹ ಹಿರಿಯರನ್ನು ಪ್ರತಿ ಕ್ಷಣವೂ ಎಲ್ಲರೂ ನೆನಪಿಸಿಕೊಂಡು ಗೌರವಿಸಬೇಕು. ಪ್ರಧಾನ ಮಂತ್ರಿ ಹಾಗೂ ರಾಜ್ಯದ ಮುಖ್ಯಮಂತ್ರಿ ನೀಡಿರುವ ಸಂದೇಶ ದೇಶಕ್ಕೆ ಗೌರವ ತರುವಂತಿದೆಯಲ್ಲದೆ ಪ್ರತಿಯೊಬ್ಬರು ಮನಸ್ಸು ಪರಿವರ್ತನೆ ಮಾಡಿಕೊಳ್ಳುವಂತಿದೆ.

ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಪುರಸಭೆ ಸದಸ್ಯರು ಹಾಗೂ ಆಯುಕ್ತ ವಾಸಿಂ ಈ ಸಂದರ್ಭದಲ್ಲಿದ್ದರು.

ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252

# ಬಿಜೆಪಿಗೆ ಮರಳಿ ಅಧಿಕಾರದ ಗದ್ದುಗೆ : ನರೇಂದ್ರ ಮೋದಿ

**ನವದೆಹಲಿ** : ಪ್ರಧಾನಿ ನರೇಂದ್ರಮೋದಿ ಅವರು ದೆಹಲಿಯ ಕೆಂಪುಕೋಟೆಯಲ್ಲಿಂದು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾಡಿದ ಸ್ವಾತಂತ್ರ್ಯ ದಿನದ ಭಾಷಣದಲ್ಲಿ ಮುಂದಿನ ಲೋಕಸಭಾ ಚುನಾವಣೆಯ ಹೋರಾಟದ ಬಗ್ಗೆಯೂ ಪ್ರಸ್ತಾಪಿಸಿ 2024ರ ಲೋಕಸಭಾ ಚುನಾವಣೆ ಭ್ರಷ್ಟಾಚಾರ, ಸ್ವಜನ ಪಕ್ಷಪಾತ ತುಷ್ಟೀಕರಣದ ವಿರುದ್ಧ ಹೋರಾಟವಾಗಲಿದೆ ಎಂದು ಬಣ್ಣಿಸಿ ಪರಿವಾರವಾದಿಗಳ ಪಕ್ಷಗಳನ್ನು ಹಿಂದಿಕ್ಕಿ ಬಿಜೆಪಿ ಮತ್ತೆ ಮರಳಿ ಅಧಿಕಾರದ ಗದ್ದುಗೆ ಏರಲಿದೆ ಎಂದರು. ರಾಜಸ್ತಾನ ಶೈಲಿಯ ಬಹುವರ್ಣದ ರುಮಾಲು ಧರಿಸಿ ದೆಹಲಿಯ ಐತಿಹಾಸಿಕ ಕೆಂಪುಕೋಟೆಯ ಮೇಲೆ ಸತತ 10 ನೇ ಬಾರಿ 77ನೇ ಸ್ವಾತಂತ್ರ್ಯೋತ್ಸವ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ದೇಶದ ಜನರ ಆರ್ಶೀವಾದ ಇದ್ದರೆ ಲೋಕಸಭಾ ಚುನಾವಣೆಯಲ್ಲಿ ಗೆದ್ದು ನಾವೇ ಮರಳಿ ಅಧಿಕಾರ ಹಿಡಿಯುತ್ತೇವೆ ಎಂದು ಹೇಳುವ ಮೂಲಕ ಪ್ರಧಾನಿ ಮೋದಿ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ದೇಶದಲ್ಲಿ ಪ್ರಾಮಾಣಿಕತೆ, ಪಾರದರ್ಶಕತೆ ಮತ್ತು ನಿಷ್ಪಕ್ಷಪಾತವನ್ನು ಬಲಪಡಿಸುವ ಅಗತ್ಯತೆಯನ್ನು ಒತ್ತಿ ಹೇಳಿದ ಪ್ರಧಾನಿ ನರೇಂದ್ರಮೋದಿ ಅವರು, ಭ್ರಷ್ಟಾಚಾರಕ್ಕಿಂತ ದೊಡ್ಡ ಕಾಯಿಲೆ ಮತ್ತೊಂದಿಲ್ಲ ಎಂದರು. ಭ್ರಷ್ಟಾಚಾರ, ಸ್ವಜನಪಕ್ಷಪಾತ ಮತ್ತು ತುಷ್ಟೀಕರಣದ ಕಾಯಿಲೆಗಳು ದೇಶವನ್ನು ಅಭಿವೃದ್ಧಿಯಲ್ಲಿ ಹಿಂದಕ್ಕೆ ಕೊಂಡೊಯ್ಯುತ್ತಿದೆ ಎಂದು ಹೇಳುವ ಮೂಲಕಪರಿವಾರವಾದಿ ವಿಪಕ್ಷಗಳ ಒಕ್ಕೂಟದ ವಿರುದ್ಧ ವಾಗ್ದಾಳಿ ನಡೆಸಿದರು.

ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆಮೀಸಲಿಟ್ಟಿದ್ದ ಆಸನವನ್ನು ಗಮನಿಸಿ ರಾಜಕೀಯ ವಿಷಯವನ್ನು ಪ್ರಸ್ತಾಪಿಸಿದವರು, ಖಾಲಿ ಕುರ್ಚಿ ದೇಶಕ್ಕೆ ಯಾವ ಸಂದೇಶ ಕಳುಹಿಸುತ್ತಿದೆ. ಗೈರು ಹಾಜರಿ ಆರೋಗ್ಯಕರ ಬೆಳವಣಿಗೆಯಲ್ಲ ಎಂದು ವಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿ ಇವರು ಏನೇ ಮಾಡಲಿ



ಲೋಕಸಭಾ ಚುನಾವಣೆಯಲ್ಲಿ ನಾವು ಮತ್ತೆ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದರು.

ಕುಟುಂಬ ರಾಜಕಾರಣದಿಂದ ಕಳೆದ 75 ವರ್ಷಗಳಲ್ಲಿ ಹಲವು ಸಮಸ್ಯೆಗಳು ನಮ್ಮ ವ್ಯವಸ್ಥೆಯ ಭಾಗವಾಗಿದೆ. ಕುಟುಂಬದಿಂದ, ಕುಟುಂಬಕ್ಕಾಗಿ ಕೆಲ ಪಕ್ಷಗಳು ಇವೆ ಎಂದು ಪರೋಕ್ಷವಾಗಿ ಕಾಂಗ್ರೆಸ್‌ನ್ನು ಹೆಸರಿಸದೆ ಗೇಲಿ ಮಾಡಿದರು. ಪ್ರಧಾನಿ ನರೇಂದ್ರಮೋದಿ ಅವರು 2ನೇ ಅವಧಿಗೆ ಪ್ರಧಾನಿಯಾಗಿ ಕೊನೆಯ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಕೇಂದ್ರ ಸರ್ಕಾರದ ಸಾಧನೆಗಳನ್ನು ಎಳೆ ಎಳೆಯಾಗಿ ಬಿಡಿಸಿಟ್ಟು ಸಾಧನೆಗಳ ಮೇಲೆ ಮತ್ತೆ ಅಧಿಕಾರಕ್ಕೆ ಮರಳುತ್ತೇವೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ದೇಶದ ಅಭಿವೃದ್ಧಿಯ ಹಾದಿಯಲ್ಲಿ ಬರಬಹುದಾದ ಏಕೈಕ ಅಡಚಣೆ ಎಂದರೆ ಭ್ರಷ್ಟಾಚಾರ ಕುಟುಂಬ ರಾಜಕಾರಣ ಮತ್ತು ತುಷ್ಟೀಕರಣ ಇವೆಲ್ಲವನ್ನು ಹಿಮ್ಮೆಟ್ಟಿಸಿ ದೇಶವನ್ನು ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಸಿದ್ದೇವೆ ಎಂದರು.

ಭಾರತದ ಅತ್ಯಂತ ದೊಡ್ಡ ಸಾಮರ್ಥ್ಯವೆಂದರೆ ನಂಬಿಕೆ. ಸರ್ಕಾರದ ಮೇಲೆ ಜನರ ನಂಬಿಕೆ, ದೇಶದ ಉಜ್ವಲ ಭವಿಷ್ಯಕ್ಕೆ ಸಹಕಾರಿಯಾಗಿದೆ. ಭಾರತದ ಮೇಲೆ ವಿಶ್ವದ ನಂಬಿಕೆಗೆ ಪೂರಕವಾಗಿದೆ ಎಂದಿದ್ದಾರೆ. ಮುಗಿದ ಸರಣಿ ಸ್ಫೋಟದ ಯುಗ ದೇಶದಲ್ಲಿ ಸರಣಿ ಸ್ಫೋಟಗಳ ಯುಗ ಮುಗಿದಿದೆ. ಇಂದು ದೇಶದಲ್ಲಿ ಭಯೋತ್ಪಾದಕ ದಾಳಿಯಲ್ಲಿ ಇಳಿಕೆ ಕಾಣುತ್ತಿದೆ. ನಕ್ಸಲ್ ಪೀಡಿತ ಪ್ರದೇಶಗಳೂ ತೀವ್ರ ಬದಲಾವಣೆ ಕಂಡಿವೆ ಎಂದು ಅವರು ಹೇಳಿದ್ದಾರೆ. ಭಾರತ ಈಗ ನಿಲ್ಲುವುದಿಲ್ಲ ಎಂದು ಜಾಗತಿಕ ತಜ್ಞರು ಹೇಳಿದ್ದಾರೆ, ಎಲ್ಲಾ ರೇಟಿಂಗ್ ಏಜೆನ್ಸಿಗಳು ದೇಶವನ್ನು ಹೊಗಳುತ್ತಿವೆ. ಬದಲಾಗುತ್ತಿರುವ ಜಗತ್ತನ್ನು ರೂಪಿಸುವಲ್ಲಿ ಭಾರತೀಯ ಜನರ ಸಾಮರ್ಥ್ಯಗಳು ಸ್ಪಷ್ಟವಾಗಿವೆ ಎಂದು ಹೇಳಿದ್ದಾರೆ.

ಸ್ವಾತಂತ್ರ್ಯದ 75 ನೇ ವಾರ್ಷಿಕೋತ್ಸವದ ಸ್ಮರಣಾರ್ಥ 2021 ರಲ್ಲಿ ಪ್ರಾರಂಭವಾಗಿದ್ದ ಆವರಣೆ 2023 ರ ಸ್ವಾತಂತ್ರ್ಯ ದಿನದಂದು ಪ್ರಧಾನಿ ಮೋದಿ ಭಾಷಣದ ಮೂಲಕ ಮುಕ್ತಾಯವಾಗಿದೆ. ಬಾಕ್ಸ್ 1 3ನೇ ಆರ್ಥಿಕತೆ ದೇಶ ಮುಂದಿನ ಐದು ವರ್ಷಗಳಲ್ಲಿ ಭಾರತ ಮೂರನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯ ದೇಶವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಗ್ಯಾರಂಟಿ ನೀಡಿದ್ದಾರೆ. 2047 ರಲ್ಲಿ ದೇಶ ತನ್ನ 100 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಿದಾಗ, ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿ ಹೊರಹೊಮ್ಮುತ್ತದೆ" ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಕೆಂಪುಕೋಟೆಯ ಮೇಲೆ 77ನೇ ಸ್ವಾಂತತ್ರೋತ್ಸವದ ದಿನಾಚರಣೆ ಹಿನ್ನೆಲೆಯಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಜನರ ಸಬಲೀಕರಣ ಮತ್ತು ದೇಶದ ಅಭಿವೃದ್ಧಿಗೆ ಮಾಡಿದ ವಿವಿಧ ಪ್ರಯತ್ನಗಳು ಭಾರತ ವಿಶ್ವ ಮಟ್ಟದಲ್ಲಿ ಗುರುತಿಸಿಕೊಳ್ಳಲು ಸಹಕಾರಿಯಾಗಿದೆ ಎಂದಿದ್ದಾರೆ.

1800 ವಿಶೇಷ ಆಹ್ವಾನಿತರು ದೇಶದ ವಿವಿಧ ರಾಜ್ಯಗಳ ವಿವಿಧ ವೃತ್ತಿಗಳ ಸುಮಾರು 1,800 ಜನರು ಕಾರ್ಯಕ್ರಮ ಶುಶ್ರೂಷಕರು, ರೋಮಾಂಚಕ ಗ್ರಾಮಗಳ ಸರಪಂಚ್‌ಗಳು, ಶಿಕ್ಷಕರು, ರೈತರು ಮತ್ತು ಮೀನುಗಾರರನ್ನು ಕಾರ್ಯಕ್ರಮಕ್ಕೆ ವಿಶೇಷ ಅತಿಥಿಗಳಾಗಿ ಆಹ್ವಾನಿತರಾಗಿದ್ದರು ರಾಷ್ಟ್ರೀಯ ಯುದ್ಧ ಸ್ಮಾರಕ, ಇಂಡಿಯಾ ಗೇಟ್, ನವದೆಹಲಿ ರೈಲು ನಿಲ್ದಾಣ, ಪ್ರಗತಿ ಮೈದಾನ ಮತ್ತು ರಾಜ್ ಘಾಟ್ ಈ ತಾಣಗಳಲ್ಲಿ ಸೇರಿವೆ. ರಕ್ಷಣಾ ಸಚಿವಾಲಯವು ಮೈ ಗೌ ಪೋರ್ಟಲ್‌ನಲ್ಲಿ ಆಗಸ್ಟ್ 15–20 ರಿಂದ ಆನ್‌ಲೈನ್ ಸೆಲ್ಫಿ ಸ್ಪರ್ಧೆಯನ್ನು ನಡೆಸುತ್ತಿದೆ.

## ಫಾಸ್ಟ್ ನ್ಯೂಸ್

### 60 ಅಡಿ ತ್ರಿವರ್ಣ ಧ್ವಜ ಹಾರಿಸಿದ ಯುವಕರು

**ರಾಮನಗರ** : ಜಿಲ್ಲೆಯ ಬೆಟ್ಟದ ಮೇಲೆ ಯುವಕರು 600 ಅಡಿ ಎತ್ತರದ ಮೇಲೆ 60 ಅಡಿ ತ್ರಿವರ್ಣ ಧ್ವಜ ಹಾರಿಸಿದ್ದಾರೆ. 60 ಅಡಿ ಅಗಲದ ತ್ರಿವರ್ಣ ಬಾವುಟ ಹಾರಿಸಿ ಯುವಕರು ದೇಶಭಕ್ತಿ ಮೆರೆದಿದ್ದಾರೆ. ಈ ಯುವಕರ ತಂಡ ಪ್ರತಿ ವರ್ಷ ಧ್ವಜದ ಎತ್ತರವನ್ನು ಐದು ಅಡಿ ಎತ್ತರ ಹೆಚ್ಚಿಸಿಕೊಂಡು ಹೋಗುತ್ತಿದೆ.

### ಗೃಹಲಕ್ಷ್ಮೀ ಯೋಜನೆಯ ಹಣ ಮಹಿಳೆಯರ ಖಾತೆಗೆ

**ಬೆಂಗಳೂರು** : ಭಾರತ ಇಂದು ಅನೇಕ ಕ್ಷೇತ್ರಗಳಲ್ಲಿ ಅಭಿವೃದ್ಧಿಯನ್ನು ಕಂಡಿದೆ. ಅಭಿವೃದ್ಧಿ ದೃಷ್ಟಿಯಿಂದ ಗ್ಯಾರಂಟಿಗಳು ಜಾರಿ ಮಾಡಿದ್ದೇವೆ. ಆ.27ರಂದು ಗೃಹಲಕ್ಷ್ಮೀ ಯೋಜನೆಯ ಫಲಾನುಭವಿ ಮಹಿಳೆಯರ ಖಾತೆಗೆ 2000 ಸಾವಿರ ಹಣ ಹಾಕುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

### ಪರೋಕ್ಷವಾಗಿ ಕಾಂಗ್ರೆಸ್ ವಿರುದ್ಧ ಗುಡುಗಿದ ಪ್ರಧಾನಿ

**ನವದೆಹಲಿ** : ಭಾರತ ಇಂದು ಆಧುನಿಕತೆಯತ್ತ ಹೆಜ್ಜೆ ಇಡುತ್ತಿದೆ. ನಿಷ್ಪಕ್ಷಪಾತ ಹಾಗೂ ಪಾರದರ್ಶಕಕ್ಕೆ ನಾವು ಸರ್ಕಾರದ ಹೆಚ್ಚು ಆದ್ಯತೆ ನೀಡುತ್ತೇವೆ. ಭಾರತದ ಅಭಿವೃದ್ಧಿಗಾಗಿ ದೇಶದ ಜನರ ಆಶೀರ್ವಾದ ಅಗತ್ಯವಿದೆ. ಭ್ರಷ್ಟಾಚಾರ ಮುಕ್ತ ಭಾರತಕ್ಕಾಗಿ ನಾನು ಹೋರಾಟ ಮಾಡುತ್ತಿದ್ದೇನೆ. ಕುಟುಂಬವಾದಿಗಳು ದೇಶದ ಜನರ ಹಕ್ಕುಗಳನ್ನು ಕಸಿದುಕೊಂಡಿದ್ದರು ಎಂದು ಪರೋಕ್ಷವಾಗಿ ಕಾಂಗ್ರೆಸ್ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಗುಡುಗಿದರು.

### ಧ್ವಜಾರೋಹಣ ನೆರವೇರಿಸಿದ ಶತಾಯುಷಿ ಅಜ್ಜಿ

**ಬಾಗಲಕೋಟೆ** : ಶಸ್ತ್ರಚಿಕಿತ್ಸೆಗೆ ಬಂದಿದ್ದ ಶತಾಯುಷಿ ಮಹಿಳೆಯೊಬ್ಬರು ಗುಣಮುಖರಾಗಿ ಆಸ್ಪತ್ರೆಯಲ್ಲಿ ಧ್ವಜಾರೋಹಣ ನೆರವೇರಿಸಿದ ಅಪರೂಪದ ಘಟನೆ ನಗರದ ವಾಸನದ ಆಸ್ಪತ್ರೆಯಲ್ಲಿ ಮಂಗಳವಾರ ನಡೆದಿದೆ.

### ಅಭಿವೃದ್ಧಿಗೆ 3 ಗುರಿ : ಶಿವಾನಂದ ಪಾಟೀಲ್

**ಹಾವೇರಿ** : ನೃತ್ಯದ ಮೂಲಕ ಜನ ಸಾಮನ್ಯರ ಮನಸ್ಸು ಮುಟ್ಟುವ ಕೆಲಸ ಮಾಡಿದ ಮಕ್ಕಳಿಗೆ, ಗುರುಗಳಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಹಾವೇರಿ ಜಿಲ್ಲೆಗೆ ಮೂರು ಗುರಿಗಳನ್ನಿಟ್ಟುಕೊಂಡಿದ್ದೇವೆ. ಹಾವೇರಿ ಮೆಡಿಕಲ್ ಕಾಲೇಜು ಶೀಘ್ರದಲ್ಲೇ ಆರಂಭವಾಗುತ್ತದೆ. ಮತ್ತೆ 25 ಕೋಟಿ ರೂ. ಹಣ ಸಿಎಂ ಬಿಡುಗಡೆ ಮಡಿದ್ದಾರೆ. ಕುಡಿಯುವ ನೀರಿನ ಸುವ್ಯವಸ್ಥೆ ಮಾಡುತ್ತಿದ್ದೇವೆ. ನೀರಾವರಿ ಇಲಾಖೆಯ ಅಭಿವೃದ್ಧಿ ಕೆಲಸ ಮಾಡುತ್ತಿದ್ದೇವೆ. ಈ ಮೂರು ಕೆಲಸಗಳನ್ನು ಆದಷ್ಟು ಬೇಗ ಮಾಡಿ ಮುಗಿಸುತ್ತೇವೆ ಎಂದು ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ಹೇಳಿದರು.

# ಮದಕರಿ ವಿದ್ಯಾ ಸಂಸ್ಥೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ



ಚಿತ್ರದುರ್ಗ: ಜಿಲ್ಲಾ ಮದಕರಿ ನಾಯಕ ವಿದ್ಯಾ ಸಂಸ್ಥೆ ಸಂಸ್ಥೆಯ ವತಿಯಿಂದ 77ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಡಗರ ಸಂಭ್ರಮದಿಂದ ನೆರವೇರಿಸಲಾಯಿತು.

ಮದಕರಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಸಂದೀಪ್ ಅವರು ಧ್ವಜಾರೋಹಣ ನೆರವೇರಿಸಿದರು. ಆಡಳಿತ ಅಧಿಕಾರಿಗಳಾದ ಸಾಗರ್ ಮತ್ತು ಸಂಸ್ಥೆಯ ಕಾರ್ಯದರ್ಶಿ ವೈ.ಬಿ .ದಿವ್ಯ ಸರಸ್ವತಿ ಹಾಗೂ ಝಾನ್ಸಿ ಲಕ್ಷ್ಮೀ ಮತ್ತು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಪ್ರಾಂಶುಪಾಲರು, ಮುಖ್ಯೋಪಾಧ್ಯಾಯರು ಇದ್ದರು.

# ಪತ್ರಿಕಾ ವಿತರಕರ ಸಂಘದಿಂದ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ



ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಿಕಾ ಹಂಚಿಕೆದಾರರ ಮತ್ತು ವಿತರಕರ ಸಂಘದಿಂದ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗಿಯಾದರು.

ನಗರದ ಗಾಂಧಿ ಸರ್ಕಲ್ ನಲ್ಲಿ ಮುಂಜಾನೆ 5 ರ ಸಮಯದಲ್ಲಿ ಪತ್ರಿಕೆ ವಿತರಿಸುವವರ ಜೊತೆ ತಮ್ಮ ವಾಹನಗಳಿಗೆ ತ್ರಿರಂಗವನ್ನ ಕಟ್ಟಿಕೊಂಡು ತಾಯಿ ಭಾರತಾಂಬೆಯ ಭಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಜಯಘೋಷ ಹಾಕಿ ಸಿಹಿ ವಿತರಿಸಿ ಸಂಭ್ರಮಿಸಿದರು.

ನಗರದ ಎಲ್ಲಾ ವಿತರಕರು ಭಾಗವಹಿಸಿದ್ದರು. ಸಮಸ್ತ ಭಾರತೀಯರಿಗೆ 77 ನೇ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳು.

ಸ್ವಾತಂತ್ರೋತ್ಸವದ ಈ ಹೊಸ್ತಿಲಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವ ಮತ್ತು ಜೀವನವನ್ನು ಮುಡಿಪಾಗಿಟ್ಟು ಭಾರತದ ಪ್ರಜೆಗಳಿಗೆ ಸದೃಢ ರಾಷ್ಟ್ರ ನಿರ್ಮಾಣಕ್ಕಾಗಿ ಶ್ರಮಿಸಿದ ಎಲ್ಲಾ ಮಹನೀಯರಿಗೂ ಕೃತಜ್ಞತಾ ಪೂರ್ವಕವಾಗಿ ಗೌರವ ನಮನ ಸಲ್ಲಿಸೋಣ ಎಂದು ಜಿಲ್ಲಾಧ್ಯಕ್ಷ ಎಸ್. ತಿಪ್ಪೇಸ್ವಾಮಿ ತಿಳಿಸಿದರು.

# "ಮೇರಾ ಮಾಟಿ, ಮೇರಾ ದೇಶ್" ಅಭಿಯಾನದಡಿ ಪ್ರತಿಜ್ಞಾವಿಧಿ ಬೋಧನೆ




**ಹೊಸದುರ್ಗ** : ಸರ್ಕಾರದ ಪ್ರಮುಖ ಯೋಜನೆಗಳಲ್ಲಿ ಒಂದಾದ ಮೇರಾ ಮಾಟಿ, ಮೇರಾ ದೇಶ್ ಯೋಜನೆಯು ಒಚಿದಾಗಿದುವೀ ಕಾರ್ಯಕ್ರಮದ ಅಂಗವಾಗಿ ಪಂಚಪ್ರಾಣ ಪ್ರತಿಜ್ಞಾವಿದಿ ಮಾಡಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ತಿಳಿಸಿದರು.

ಪಟ್ಟಣದ ಪುರಸಭೆ ಮತ್ತು ಯುವಜನ ಕ್ರೀಡಾ ಇಲಾಖೆ ಸಂಯೋಗದೊಂದಿಗೆ ಪಂಚಪ್ರಾಣ ಪ್ರತಿಜ್ಞಾವಿದಿ ಕಾರ್ಯಕ್ರಮವನ್ನು ಪುರಸಭೆ ಅವರಣದಲ್ಲಿ ಮಣ್ಣನು ಹಿಡಿದು ಹಸ್ತಾಂತರಿಸಿ ಸ್ವಾತಂತ್ರ ಹೋರಾಟದಲ್ಲಿ ವೀರ ಮರಣ ಹೊಂದಿದ ನಾಯಕರಿಗೆ ಸಮರ್ಪಣೆ ಮಾಡಲು ಜಿಲ್ಲಾ ಕೇಂದ್ರಕ್ಕೆ ತಲುಪಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸೇವಾದಳ, ಶಾಲಾಮಕ್ಕಳು, ಸ್ತ್ರೀಶಕ್ತಿ ಸಂಘದ ಮಹಿಳಾ ಪ್ರತಿನಿಧಿಗಳು, ಪುರಸಭಾ ಸಿಬ್ಬಂದಿ ಹಾಗೂ ಕಾರ್ಮಿಕರು, ಪುರಸಭಾ ಸದಸ್ಯರು ಮತ್ತು ಚುನಾಯಿತ ಪ್ರತಿನಿಧಿಗಳು ಸಂಯೋಗದೊಂದಿಗೆ ಒಗ್ಗಟಿನಿಂದ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಿ ಎಲ್ಲರ ಕೈಯಿಂದ ಮಣ್ಣನ್ನು ಒಗ್ಗೂಡಿಸಲಾಯಿತು.

ಈ ಅಭಿಯಾನದಡಿ ಪಂಚಪ್ರಾಣ ಪ್ರತಿಜ್ಞಾವಿಧಿ ಕಾರ್ಯಕ್ರಮದಡಿ ಎಲ್ಲಾ ಸಾರ್ವಜನಿಕರು ಮಣ್ಣು ಹಿಡಿದು ಪ್ರತಿಜ್ಞೆ ಮಾಡಿ ಸೆಲ್ಫಿ ತೆಗೆದು ಯುವಜನ ಮತ್ತು ಕ್ರೀಡಾ ಇಲಾಖೆ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಿ ಸರ್ಟಿಪಿಕೇಟ್‌ನ್ನು ಪಡೆದುಕೊಳ್ಳಬಹುದಾಗಿದೆ ಹಾಗೂ ವಸುಧಾ ವಂದನ ಕಾರ್ಯಕ್ರಮದಡಿ ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ ಸಹಕಾರದೊಂದಿಗೆ 75 ಗಿಡಗಳನ್ನು ನೇಡುವುದು ಹಾಗೂ ವೀರಯೋಧರ ಹೆಸರುಗಳನ್ನು ಕೆತ್ತಿಸಿ ಶೀಲಾಫಲಕವನ್ನು ಸಮರ್ಪಣೆ ಮಾಡುವ ಮೂಲಕ ಸಂಪೂರ್ಣ ಕಾರ್ಯಕ್ರಮವನ್ನು ಅಯೋಜಿಸಲಾಗಿದ್ದು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಬಾಗವಹಿಸಿ ರಾಷ್ಟ್ರ ಪ್ರೇಮ ಮೆರೆಯಲು ಸಹಾಯಕ ನಿರ್ದೇಶಕ ಕ್ರೀಡಾ ಇಲಾಖೆ ಕರೆ ನೀಡಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ದಾಳಿಂಬೆ ಗಿರೀಶ್, ಕಂದಾಯ ನಿರೀಕ್ಷರಾದ ಕುಮಾರ್ ಜಿ.ಎನ್ ಶಾಸಕರ ಆಪ್ತ ಸಹಾಯಕರಾದ ಪುರದ ರಂಗನಾಥ, ಅರೋಗ್ಯ ನಿರೀಕ್ಷರಾದ ಕಲ್ಪನಾ, ಪ್ರದೀಪ್, ಪುರಸಭಾ ಸಿಬ್ಬಂದಿಗಳಾದ ಸಾವಿತ್ರಿ, ಮಹಿಳಾ ಪ್ರತಿನಿಧಿಗಳು ಹಾಜರಿದ್ದರು.

# ಉಚಿತ ಗ್ಯಾರಂಟಿಗಳ ನಡುವೆ ದುಡಿಯುವ ವರ್ಗವೇ ಇಲ್ಲ : ಎಂ. ಚಂದ್ರಪ್ಪ



**ಹೊಳಲ್ಕೆರೆ** : ಹನ್ನೆರಡನೆ ಶತಮಾನದಲ್ಲಿಯೇ ಬಸವಣ್ಣನವರು ಕಾಯಕವೇ ಕೈಲಾಸ ಎನ್ನುವ ಸಂದೇಶ ನೀಡಿದ್ದರು. ಈಗಿನ ಕಾಂಗ್ರೆಸ್ ಸರ್ಕಾರದ ಐದು ಉಚಿತ ಗ್ಯಾರಂಟಿಗಳ ನಡುವೆ ದುಡಿಯುವ ವರ್ಗವೇ ಇಲ್ಲದಂತಾಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ವಿಷಾಧಿಸಿದರು.

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ ಹೊಳಲ್ಕೆರೆ ಶಾಖೆ ಹಾಗೂ ಮನೋರಂಜನಾ ವಿಭಾಗದ ಸಂಯೋಜನೆಯೊಂದಿಗೆ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನನಗೆ ಡಾಕ್ಟರೇಟ್ ಗೌರವ ಸಿಗುತ್ತದೆಂದು ಆಸೆಪಟ್ಟು ಕೆಲಸ ಮಾಡಿದವನಲ್ಲ. ಸಿಕ್ಕಿರುವ ಅವಕಾಶವನ್ನು ಸಾರ್ವಜನಿಕರಿಗೆ ಧಾರೆ ಎರೆಯುವ ಮೂಲಕ ಬದುಕನ್ನು ಸಾರ್ಥಕ ಪಡಿಸಿಕೊಳ್ಳಬೇಕೆಂಬ ಜಾಯಮಾನ ನನ್ನದು. ಹದಿನಾರು ವರ್ಷದ ಕೆಳಗೆ ಇಲ್ಲಿ ಇಕ್ಕಟ್ಟಾದ ರಸ್ತೆಯಿದ್ದುದನ್ನು ನೋಡಿ ಸಿಮೆಂಟ್ ರಸ್ತೆ ಮಾಡಿಸಿದೆ. ಇನ್ನು ಗಟ್ಟಿಮುಟ್ಟಾಗಿದೆ. ಹಾಳಾಗಿಲ್ಲ. ಎರಡು ಎಕರೆಯಲ್ಲಿ ದೊಡ್ಡ ಕೊಚ್ಚೆಗುಂಡಿಯಿತ್ತು. ಇಡೀ ಊರಿನ ಗಲೀಜೆಲ್ಲಾ ಬಂದು ಸೇರುತ್ತಿತ್ತು. ಗುಂಡಿ ಮುಚ್ಚಿಸಿ ಆರು ಕೋಟಿ ರೂ.ಗಳನ್ನು ಖರ್ಚು ಮಾಡಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲೆಂದು ಮೂರ್‍ನಾಲ್ಕು ಅಂತಸ್ತಿನ ಹಾಸ್ಟೆಲ್ ಕಟ್ಟಿಸಿದ್ದೇನೆ. ಹೊಳಲ್ಕೆರೆ ಪಟ್ಟಣದಲ್ಲಿರುವ ಚಿಕ್ಕ ಕೆರೆ ಕಲುಷಿತವಾಗಿತ್ತು. ಅದನ್ನು ಶುದ್ದೀಕರಿಸಿದ್ದೇನೆ. ಅಧಿಕಾರ ನೀಡಿದ ಜನರಿಗೆ ಏನು ಮಾಡಿದರೆ ಒಳ್ಳೆಯದು ಎನ್ನುವ ಆಲೋಚನೆಯಿಟ್ಟುಕೊಂಡು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದರು.

ನಾನು ಓದ ಕಡೆಗೆಲ್ಲಾ ಸಾರ್ವಜನಿಕರ ಬದುಕು ಹೇಗಿದೆ ಎನ್ನುವುದನ್ನು ತಿಳಿದುಕೊಂಡು ಅಗತ್ಯ ಸೌಲಭ್ಯಗಳನ್ನು ಒದಗಿಸಿದ್ದೇನೆ. 510 ಕೋಟಿ ರೂ.ಗಳನ್ನು ಖರ್ಚು ಮಾಡಿ ತಾಲ್ಲೂಕಿನಾದ್ಯಂತ ಪ್ರತಿ ಮನೆ ಮನೆಗೆ ಶುದ್ದ ಫಿಲ್ಟರ್ ನೀರು ಕೊಡುತ್ತಿದ್ದೇನೆ. ಉತ್ತಮ ಸ್ಟೇಡಿಯಂ, ವಿಧಾನಸೌದ, ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಲಾಗಿದೆ. ಒಳ್ಳೆಯದು ಮಾಡಲು ಆಗದಿದ್ದರೂ ಯಾರಿಗೂ ಕೆಟ್ಟದ್ದನ್ನು ಬಯಸಬಾರದು. ಮತ್ತೊಬ್ಬರಿಗೆ ಬೇಸರವಾಗದಂತೆ ಜೀವನ ಸಾರ್ಥಕಪಡಿಸಿಕೊಳ್ಳಬೇಕು ಎನ್ನುವ ಮನೋಭಾವನೆ ನನ್ನದು ಎಂದರು.

ನಿವೃತ್ತ ನೌಕರರ ಸಂಘದ ಗೌರವಾಧ್ಯಕ್ಷ ಹೆಚ್.ಶಿವಲಿಂಗಪ್ಪ, ಬಿ.ಮಲ್ಲೇಶಪ್ಪ, ಚಂದ್ರಶೇಖರ್ ತಾಳ್ಯ, ಸಂಧ್ಯಾ ಶಂಕರ್, ಜಿ.ಎಸ್.ನಾಗರಾಜ್‌ರಾವ್, ಬಸವರಾಜ್, ಡಿ.ಗೋಪಾಲಪ್ಪ, ಪುರಸಭೆ ಮಾಜಿ ಅಧ್ಯಕ್ಷ ಆರ್.ಎ.ಅಶೋಕ್, ಮಲ್ಲಿಕಾರ್ಜುನ್, ಬಸವರಾಜ್ ಯಾದವ್, ಮಾರುತೇಶ್ ಇನ್ನಿತರರು ಈ ಸಂದರ್ಭದಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T